ಸಂಪುಟ : 9 ಸಂಚಿಕೆ 233 ಮುಟ : 4 ಬೆಲೆ: 3.00 ಗುರುವಾರ ಅಕ್ಟೋಬರ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 233 Pages : 4 Price : 3.00 Thursday October 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ನೂರು ವರ್ಷ । ವಿಧಾನಮಂಡಲದ ಜಂಟಿ ಅಧಿವೇಶನಕ್ಕೆ ಬರಾಕ್ ಓಬಾಮಾ ಆಹ್ವಾನಕ್ಕೆ ಚಿಂತನೆ: ಸಚಿವ ಎಚ್.ಕೆ. ಪಾಟೀಲ

# ರಾಜ್ಯಾದ್ಯಂತ ವರ್ಷವಿಡೀ 'ಗಾಂಧಿ ಭಾರತ' ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು 'ಗಾಂಧಿ ಭಾರತ' ಹೆಸರಿನಲ್ಲಿ ವರ್ಷವಿಡೀ ರಾಜ್ಯಾದ್ಯಂತ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಬೆಳಗಾವಿಯಲ್ಲಿ ಬರುವ ಡಿಸೆಂಬರ್‌ನಲ್ಲಿ ನಡೆಯುವ ವಿಧಾನಮಂಡಲದ ಜಂಟಿ ಅಧಿವೇಶನಕ್ಕೆ ಅಮೆರಿಕಾದ ಮಾಜಿ ಅಧ್ಯಕ್ಷ ಬರಾಕ್ ಓಬಾಮಾ ಅವರನ್ನು ಆಹ್ವಾನಿಸುವ ಚಿಂತನೆ ನಡೆದಿದೆ ಎಂದು ಶತಮಾನೋತ್ಸವ



ಸಮಿತಿಯ ಅಧ್ಯಕ್ಷರೂ ಆಗಿರುವ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ವಿಧಾನಸೌಧದಲ್ಲಿ ಬುಧವಾರ ನಡೆದ ಶತಮಾನೋತ್ಸವ ಸಮಿತಿಯ ಮೊದಲ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಮಾತನಾಡಿ, ಶತಮಾನೋತ್ಸವದ ಅಂಗವಾಗಿ ಒಂದು ವರ್ಷದ ಕಾಲ ಮಹಾತ್ಮ ಗಾಂಧೀಜಿಯವರ ಚಿಂತನೆ, ಪ್ರಯೋಗಗಳನ್ನು ಪುನರ್ ಮನನ ಮಾಡುವಂತೆ ಕಾರ್ಯಕ್ರಮಗಳನ್ನು ರೂಪಿಸಬೇಕು. ಮಕ್ಕಳು, ಯುವಜನರ ಮೇಲೆ ಪ್ರಭಾವ ಬೀರುವ ರೀತಿಯಲ್ಲಿ ಅರ್ಥಪೂರ್ಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು. ನವೆಂಬರ್ 14 ಜವಾಹರಲಾಲ್ ನೆಹರು ಅವರ ಜನ್ಮದಿನದಂದು ನೆಹರು ಅವರು ಗಾಂಧೀಜಿಯವರಿಂದ ಪ್ರಭಾವಿತರಾಗಿ ದೇಶದ ಅಭಿವೃದ್ಧಿಗೆ ಜಾರಿಗೊಳಿಸಿದ ಕಾರ್ಯಕ್ರಮಗಳನ್ನು ಸ್ಮರಿಸುವ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕೆಂದು ಸಲಹೆ ನೀಡಿದರು.

ವಿ.ಪ ಮಾಜಿ ಸಭಾಪತಿ ಬಿ.ಎಲ್. ಶಂಕರ ಮಾತನಾಡಿ, ಗಾಂಧೀ ಮತ್ತು ಭಾರತವನ್ನು ಪ್ರತ್ಯೇಕವಾಗಿ ನೋಡಲು ಸಾಧ್ಯವಿಲ್ಲ. ಆದ್ದರಿಂದ ಈ ಕಾರ್ಯಕ್ರಮಕ್ಕೆ 'ಗಾಂಧೀ ಭಾರತ' ಎಂಬ ಶೀರ್ಷಿಕೆ ನೀಡಲಾಗಿದೆ. ಪ್ರಾಥಮಿಕ, ಪ್ರೌಢ, ಉನ್ನತ ಶಿಕ್ಷಣ, ಕನ್ನಡ ಮತ್ತು ಸಂಸ್ಕೃತಿ, ಸಮಾಜ ಕಲ್ಯಾಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಸಂಬಂಧಿಸಿದ ಇಲಾಖೆಗಳು ತಕ್ಷಣ ಜಾರಿಗೊಳಿಸಬಹುದಾದ, ಮಧ್ಯಮಾವಧಿಯ ಮತ್ತು ದೀರ್ಘಾವಧಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಎಲ್ಲ ಸರ್ಕಾರಿ ಮತ್ತು ಖಾಸಗಿ ಶಾಲಾ–ಕಾಲೇಜುಗಳ ಪ್ರಮುಖ ಸ್ಥಳಗಳಲ್ಲಿ ಧ್ಯಾನಸ್ಥ ಸ್ಥಿತಿಯಲ್ಲಿರುವ ಗಾಂಧಿಜಿಯವರ ಭಾವಚಿತ್ರಗಳನ್ನು ಅಳವಡಿಸಲು ಕ್ರಮ ವಹಿಸಬೇಕು. ಗಾಂಧಿ ಭವನ, ಚಿತ್ರಕಲಾ ಪರಿಷತ್ ಈ ಚಿತ್ರಗಳನ್ನು ಒದಗಿಸಲಿವೆ. ಡಿ.ಎಸ್. ನಾಗಭೂಷಣ್ ಅವರು ಬರೆದ ಗಾಂಧಿ ಕಥನ ಕೃತಿಯನ್ನು ಮುದ್ರಿಸಿ ವಿತರಿಸಲು ಹಾಗೂ ರಿಚರ್ಡ್ ಅಟೆನ್ ಬರೋ ನಿರ್ದೇಶನದ ಮಹಾತ್ಮ ಗಾಂಧಿ ಚಲನಚಿತ್ರವನ್ನು ಕನ್ನಡಕ್ಕೆ ಡಬ್ಬಿಂಗ್ ಮಾಡಿಸುವ ಕಾರ್ಯವನ್ನು ಕೈಗೊಳ್ಳಬೇಕೆಂದು ಸಲಹೆ ನೀಡಿದರು.

ಶಾಲಾ ಶಿಕ್ಷಣ ಮತ್ತು ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಮಾತನಾಡಿ, ರಾಜ್ಯದಲ್ಲಿ 57 ಸಾವಿರಕ್ಕೂ ಹೆಚ್ಚು ಶಾಲೆಗಳಿವೆ. ಶೈಕ್ಷಣಿಕ ಕ್ಯಾಲೆಂಡರ್‌ಗೆ ವ್ಯತ್ಯಯವಾಗದಂತೆ ಗಾಂಧೀಜಿಯವರ ಕುರಿತು ಪ್ರಬಂಧ, ಭಾಷಣ, ಚಿತ್ರಕಲೆ ಮತ್ತಿತರ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಗಾಂಧೀಜಿಯವರ ಉಕ್ತಿಗಳು ಹಾಗೂ ಅವರು ಹೇಳಿದ ಏಳು ಸಾಮಾಜಿಕ ಪಾತಕಗಳ ಕುರಿತು ಡಿಜಿಟಲ್ ಮುದ್ರಣಗಳನ್ನು ಎಲ್ಲ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಅನಾವರಣಗೊಳಿಸಲು ಕ್ರಮ ವಹಿಸಲಾಗುವುದು ಎಂದರು.

▸▸3ನೇ ಪುಟಕ್ಕೆ

ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿವಿಧ ಅಕಾಡೆಮಿಗಳ ಮೂಲಕ ಹಿಂದಿ, ಉರ್ದು, ತುಳು, ಕೊಡವ, ಕೊಂಕಣಿ, ಲಂಬಾಣಿ ಮತ್ತಿತರ ಭಾಷೆಗಳಲ್ಲಿ ಮಹಾತ್ಮ ಗಾಂಧೀಜಿಯವರ ಕುರಿತು ಕಿರುಪುಸ್ತಕಗಳನ್ನು ಪ್ರಕಟಿಸಿ ವಿತರಿಸಲಾಗುವುದು ಎಂದರು.

ಇಂಧನ ಸಚಿವ ಕೆ.ಜೆ. ಜಾರ್ಜ್ ಮಾತನಾಡಿ, ಶತಮಾನೋತ್ಸವ ಸಂದರ್ಭದಲ್ಲಿ ಬೆಳಗಾವಿ ನಗರದಲ್ಲಿ ಆಕರ್ಷಕವಾಗಿ ವಿದ್ಯುತ್ ದೀಪಾಲಂಕಾರ ಮಾಡಲಾಗುವುದು. ಗಾಂಧೀಜಿಯವರು ಕರ್ನಾಟಕದಲ್ಲಿ ಭೇಟಿ ನೀಡಿದ ಪ್ರಮುಖ ಸ್ಥಳಗಳಲ್ಲಿ ಸ್ಥಳೀಯ ಆಡಳಿತ ಹಾಗೂ ಸಂಸ್ಥೆಗಳ ಸಹಯೋಗದಲ್ಲಿ ದೀಪಾಲಂಕಾರ ಮಾಡಲು ಕ್ರಮ ವಹಿಸುವುದಾಗಿ ತಿಳಿಸಿದರು.

> ಗಾಂಧೀಜಿಯವರಿಗೆ ಆಪ್ತವಾದ ಗ್ರಾಮೀಣಾಭಿವೃದ್ಧಿ ಮತ್ತು ಸ್ವರಾಜ್ ಚಟುವಟಿಕೆಗಳನ್ನು ಸಂಬಂಧಿಸಿದ ಇಲಾಖೆಗಳೊಂದಿಗೆ ಹಮ್ಮಿಕೊಳ್ಳಲಾಗುವುದು. ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಮತ್ತು ಗಾಂಧಿ ವಿಚಾರಗಳ ಪರಿಣಿತರ ಸಲಹೆ ಪಡೆದು ಅರ್ಥಪೂರ್ಣ, ರಚನಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.
>
> **– ಎಚ್.ಕೆ. ಪಾಟೀಲ.**
> ಸಚಿವರು, ಶತಮಾನೋತ್ಸವ ಸಮಿತಿಯ ಅಧ್ಯಕ್ಷರು.

---

## ಗದಗ –ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಅ.24 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 – ವಾಲ್ಮೀಕಿ ಭವನ, ಕರುಗಲ್ ಲೇಔಟ್, ಕಮತರ ಪ್ಲಾಟ್, ಟವರ್ ಕಂಬ, ವಿಜಯನಗರ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 34 – ಸೇವಾಲಾಲ ನಗರ, ಬಾಪೂಜಿ ನಗರ, ಬ್ಯಾಂಕ್ ಸುತ್ತಮುತ್ತಲಿನ ಲೈನ್‌ಗಳು, ವಿಶ್ವೇಶ್ವರಯ್ಯ ನಗರ. ವಾರ್ಡ್ ನಂ. 21, 23 – ಮೇಹರವಾಡೆ ಸಂಧಿ, ಚೆನ್ನಪ್ಪ ಲೈನ್, ಹೊಸ ಲೈನ್, ರಾಮದಾಸ, ಮುನವಳ್ಳಿ, ಎಲಿಗಾರ ಪ್ಲಾಟ್, ಕಮತರ ಪ್ಲಾಟ್, ಅಕ್ಕಿ ಪ್ಲಾಟ್, ಭೂಮಾ ಲೈನ್, ಗುಳಗುಂದಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 31 – ಸರಾಫ್ ಬಜಾರ್, ಮಾಬುಸುಬಾನಿ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ.10, 8, 9 – ಕಬಾಡೆ ರಸ್ತೆ, ಗ್ಲಾಸ್ ಹೌಸ್ ಶಾಲೆಯ ಹಿಂದಿನ ಭಾಗ ಶಿರಹಟ್ಟಿ ಓಣಿ, ಹೆಲ್ತ್ ಕ್ಯಾಂಪ್, ಕುರಹಟ್ಟಿ ಪೇಟೆ, ಪೊಲೀಸ್ ಕ್ವಾರ್ಟರ್ಸ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಜನರ ಸೇವೆ ಮಾಡಿದ ತೃಪ್ತಿ ನನಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

65 ವರ್ಷದ ನನ್ನ ಜೀವನದಲ್ಲಿ ಹಾಗೂ 35 ವರ್ಷಗಳ ಸಾರ್ವಜನಿಕ ಬದುಕಿನಲ್ಲಿ ಪಕ್ಷಭೇದ ಮರೆತು ಜನರ ಸೇವೆ ಮಾಡಿದ ತೃಪ್ತಿ ನನಗಿದೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಬುಧವಾರ ನಗರದ ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಭಾರತೀಯ ಜನತಾ ಪಾರ್ಟಿ ಹಾಗೂ ಸಿ. ಸಿ ಪಾಟೀಲ ಅಭಿಮಾನಿ ಗಳಗದಿಂದ ಅವರ 66ನೇ ಜನ್ಮದಿನದ ಅಂಗವಾಗಿ ಅಂಧ– ಅನಾಥ



ಮತ್ತು ಕಾಶಿ ಪೀಠದ ವಟುಗಳಿಗೆ ಹಾಗೂ ಪೌರ ಕಾರ್ಮಿಕರಿಗೆ ಬಟ್ಟೆ ವಿತರಣೆ, ವೀರರಾಣಿ ಕಿತ್ತೂರು ಚನ್ನಮ್ಮ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ದಿ. ಅನಂತಕುಮಾರ ಅವರು ನನಗೆ ಮೊಟ್ಟ ಮೊದಲ ಬಾರಿಗೆ ನರಗುಂದ ವಿಧಾನಸಭೆ ಕ್ಷೇತ್ರದ ಟಿಕೆಟ್ ನೀಡಿದರು. ಸಂಘ ಪರಿವಾರ ಮತ್ತು ಬಿಜೆಪಿ ಹಿರಿಯ ನಾಯಕರ ಬೆಂಬಲ ಮತ್ತು ನರಗುಂದ ಮತಕ್ಷೇತ್ರದ ಜನರ ಆಶೀರ್ವಾದದಿಂದ ಜನಸೇವೆ ಮಾಡುವ ಅವಕಾಶ ದೊರೆಯಿತು. ಯಡಿಯೂರಪ್ಪ ಸರಕಾರದಲ್ಲಿ ಮಂತ್ರಿಯಾಗಿ, ಬಸವರಾಜ ಬೊಮ್ಮಾಯಿ ಸಂಪುಟದಲ್ಲಿ ಲೋಕೋಪಯೋಗಿ ಇಲಾಖೆ ಸಚಿವನಾಗಿ ಜನಸೇವೆಯನ್ನು ಪ್ರಾಮಾಣಿಕವಾಗಿ ಮಾಡಿದ ತೃಪ್ತಿ ನನಗಿದೆ ಎಂದರು.

ಕೋವಿಡ್ ಸಂಕಷ್ಟದಲ್ಲಿ ಜೀವದ ಹಂಗು ತೊರೆದು ನಗರ ಸ್ವಚ್ಛ ಮಾಡಿದ ಪೌರ ಕಾರ್ಮಿಕರಿಗೆ ನನ್ನ ಜನ್ಮ ದಿನದಂದು ಸನ್ಮಾನಿಸಿ ಗೌರವ ನೀಡುತ್ತಿರುವುದು ಹೆಮ್ಮೆಯ ವಿಷಯ. ಅದೇ ರೀತಿ ಭವಿಷ್ಯದ ಸ್ವಾಮೀಜಿಗಳಿಗೂ ಬಟ್ಟೆ ವಿತರಣೆ, ಸನ್ಮಾನ ಮಾಡುತ್ತಿರುವುದು ಖುಷಿ ತಂದಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಡಾ. ಶೇಖರ ಸಜ್ಜನವರ, ಸಂತೋಷ ಅಕ್ಕಿ, ಜಗನ್ನಾಥಸಾ ಬಾಂಡಗೆ, ಎಂ. ಎಂ. ಹಿರೇಮಠ, ತೋಟೋಸಾ ಬಾಂಡಗೆ, ವೆಂಕಣ್ಣ ಜೋಶಿ, ವಿನಾಯಕ ಮಾನ್ವಿ, ಪ್ರಕಾಶ ಅಂಗಡಿ, ಶಿವರಾಜಗೌಡ ಹಿರೇಮನಿಪಾಟೀಲ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಪ್ರಶಾಂತ್ ನಾಯ್ಕರ, ವಿಜಯಲಕ್ಷ್ಮೀ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಶಾರದಾ ಸಜ್ಜನರ, ಕಿಶನ್ ಮೆರವಾಡೆ, ಮಂಜುನಾಥ ಮುಳಗುಂದ, ಬಿ ಹೆಚ್ ಲದ್ವಾ, ಭೀಮಸಿಂಗ್ ರಾಥೋಡ, ನಾಗರಾಜ ತಳವಾರ, ಲಕ್ಷ್ಮಿ ಶಂಕರ್ ಖಾಕಿ, ಮಹೇಶ ದಾಸರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> ಸಿ. ಸಿ ಪಾಟೀಲರು ತಮ್ಮ ಜೀವನವನ್ನು ಜನರ ಸೇವೆಗಾಗಿ ಮುಡಿಪಾಗಿಟ್ಟಿದ್ದಾರೆ. ಕೋವಿಡ್ ಸಮಯದಲ್ಲಿ ಅವರು ಕೈಗೊಂಡ ನಿರ್ಧಾರಗಳನ್ನು ರಾಜ್ಯದ ಜನತೆ ಮೆಚ್ಚಿದ್ದಾರೆ. ಪಕ್ಷದ ಕಾರ್ಯಕರ್ತರು ಹಾಗೂ ನಾಯಕರನ್ನು ಬೆಳೆಸುವ ಗುಣಗಳನ್ನು ಅವರು ಹೊಂದಿದ್ದು, ಮುಂದೆ ಅವರು ಇನ್ನೂ ಹೆಚ್ಚಿನ ಸ್ಥಾನಮಾನ ಸಿಗಲಿ ಎಂದು ಪ್ರಾರ್ಥಿಸುವೆ.
>
> **– ಉಷಾ ದಾಸರ,**
> ನಗರಸಭೆ ಮಾಜಿ ಅಧ್ಯಕ್ಷೆ

> 1995ರಿಂದ ರಾಜಕೀಯವಾಗಿ ಜೀವನ ಆರಂಭಿಸಿ, ಅಂದಿನಿಂದ ಇಂದಿನವರೆಗೂ ಅನೇಕ ಅಭಿವೃದ್ಧಿ ಕಾರ್ಯ ಮಾಡಿಕೊಂಡು ಬಂದಿದ್ದಾರೆ. ಸಿ. ಸಿ ಪಾಟೀಲರು ಸಾವಿಗೆ ಅಂಜದ ವ್ಯಕ್ತಿಯಾಗಿದ್ದು, ದೇಹದ ಒಳಗೆ ಗುಂಡು ಹೊಕ್ಕರೂ ಎದೆಗುಂದದೇ ಮತ್ತೆ ಎದ್ದು ನಿಂತು ಜನರ ಸೇವೆ ಮಾಡುತ್ತಿದ್ದಾರೆ. ಅವರಿಗೆ ಇನ್ನೂ ಹೆಚ್ಚಿನ ಸ್ಥಾನಮಾನ ಸಿಗಲಿ.
>
> **– ರಾಜು ಕುರುಡಗಿ,**
> ಬಿಜೆಪಿ ಜಿಲ್ಲಾಧ್ಯಕ್ಷ, ಗದಗ.




---

### ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟಿಸಿದ ಸಚಿವ ಗುಂಡೂರಾವ್ ಮಾತನಾಡಿದರು

# ಜನರಿಗೆ ಆರೋಗ್ಯ ಸೇವೆ ನೀಡಲು ಸರ್ಕಾರ ಬದ್ಧ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ರಾಜ್ಯ ಸರ್ಕಾರ ಜನ ಸಾಮಾನ್ಯರ ಬಗ್ಗೆ ಚಿಂತನೆ ಮಾಡುವಂತಹದ್ದಾಗಿದ್ದು, ಕಲ್ಯಾಣ ಕರ್ನಾಟಕ ಭಾಗದ ಜನರ ಸಮಗ್ರ ಆರೋಗ್ಯ ಸೇವೆ ನೀಡಲು ರಾಜ್ಯ ಸರ್ಕಾರವು ಬದ್ಧವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಚಿಕ್ಕಮ್ಯಾಗೇರಿ ಗ್ರಾಮದಲ್ಲಿ ನೂತನವಾಗಿ ಪ್ರಾರಂಭಿಸಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಉತ್ಸವ



ದಿನದಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಆರೋಗ್ಯ ಕ್ಷೇತ್ರಕ್ಕೆ 856 ಕೋಟಿ ಅನುದಾನವು ಅನುಮೊದನೆಯಾಗಿದ್ದು, ಮುದಿನ ಎರಡು ವರ್ಷದಲ್ಲಿ 2 ಹೊಸ ಜಿಲ್ಲಾಸ್ಪತ್ರೆಗಳು, 8 ಉಪವಿಭಾಗ ಆಸ್ಪತ್ರೆಗಳು, ಹೊಸ ಸಿ.ಹೆಚ್.ಸಿ ಹಾಗೂ ಪಿ.ಹೆಚ್.ಸಿ ಮಾಡಲಾಗುತ್ತಿರುವುದು ದಾಖಲೆಯಾಗಿದೆ. 24 ಪಿ.ಹೆಚ್.ಸಿ., 7 ನಗರ ಪ್ರಾಥಮಿಕ ಆರೋಗ್ಯ ಸೇರಿ ಒಟ್ಟು 31 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕ.ಕ ಭಾಗದಲ್ಲಿ ಆರಂಭಿಸಲಾಗುತ್ತಿದೆ. ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅನುಮೊದನೆ ನೀಡಿದ್ದು, ಇದರಲ್ಲಿ ಯಲಬುರ್ಗಾ ಕ್ಷೇತ್ರಕ್ಕೆ 3 ಮಂಜೂರಾಗಿವೆ.

ಈ ಮೂರು ಪಿ.ಹೆಚ್.ಸಿ ತ್ವರಿತವಾಗಿ ತಾತ್ಕಾಲಿಕ ಕಟ್ಟಡದಲ್ಲಿ ಪ್ರಾರಂಭಿಸಿ, ಜನರಿಗೆ ಆರೋಗ್ಯ ಸೇವೆ ನೀಡಲು ಕ್ರಮ ಕೈಗೊಂಡಿರುವುದು ಹೆಮ್ಮೆಯ ವಿಷಯವಾಗಿದೆ. ಟೆ–ಂಡರ್ ಕರೆದು ನೂತನ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಶಾಸಕ ಬಸವರಾಜ ರಾಯ–ರೆಡ್ಡಿ ಮಾತನಾಡಿ, ಹೆಚ್ಚಿನ ಸಂಖ್ಯೆಯ ಶಿಶು ಮರಣ, ಗರ್ಭಿಣಿಯರಿಗೆ ಪೌಷ್ಠಿಕ ಆಹಾರದ ಕೊರತೆ, ಜನರಿಗೆ ಆರೋಗ್ಯ ತೊಂದರೆಯಂತಹ ಸಮಸ್ಯೆ ಮನಗಂಡು ಮುಖ್ಯಮಂತ್ರಿಗಳು ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪ್ರಾರಂಭಕ್ಕೆ ಅನುಮೊದನೆ ನೀಡಿದ್ದಾರೆ.

▸▸3ನೇ ಪುಟಕ್ಕೆ

> ಜಿಲ್ಲೆಯ ಕುಕನೂರಿನ 30 ಹಾಸಿಗೆ ಆಸ್ಪತ್ರೆ ರೂ. 40 ಕೋಟಿ ವೆಚ್ಚದಲ್ಲಿ 100 ಹಾಸಿಗೆಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆರಿಸಲು ಅನುಮೋದನೆ ನೀಡಲಾಗಿದೆ. ಅದೇ ರೀತಿ ಕಾರಟಗಿ ಮತ್ತು ಕನಕಗಿರಿಯ ಆಸ್ಪತ್ರೆ ಸಹ ಮೇಲ್ದರ್ಜೆಗೆರಿಸಲಾಗುವುದು.
>
> **–ದಿನೇಶ್ ಗುಂಡೂರಾವ್,** ಆರೋಗ್ಯ ಸಚಿವ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಟಿ.ಲಿಂಗರಾಜು ಪ್ರಾಸ್ತಾವಿಕ ಮಾತನಾಡಿ, ಮೂಲಭೂತ ಸೌಕರ್ಯಗಳಲ್ಲಿ ಆರೋಗ್ಯ ಸೇವೆಗಳನ್ನು ನೀಡಬೇಕೆಂಬ ರಾಜ್ಯ ಸರ್ಕಾರದ ಮಹತ್ವದ ಕಾರ್ಯಕ್ರಮದ ಭಾಗವಾಗಿ ಜಿಲ್ಲೆಯಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಆರಂಭಿಸಲಾಗುತ್ತಿದೆ. ಈ ಮೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ ಎಂದರು.

---

### ಕಡ್ಡಾಯ ಕನ್ನಡ ಭಾಷೆ ಮತ್ತು ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆ

# ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 26 ಹಾಗೂ 27ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಯಾವುದೇ ಲೋಪ ದೋಷಗಳಿಲ್ಲದಂತೆ ನಡೆಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಬುಧವಾರ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು,



ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಅಕ್ಟೋಬರ್ 26ರಂದು ಜಿಲ್ಲೆಯ 4 ಪರೀಕ್ಷಾ ಕೇಂದ್ರಗಳಲ್ಲಿ ಮಧ್ಯಾಹ್ನ 1.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಹಾಗೂ ಅಕ್ಟೋಬರ್ 27ರಂದು ಜರುಗುವ ಸ್ಪರ್ಧಾತ್ಮಕ ಪರೀಕ್ಷೆಯ ದಿನದಂದು ಬೆ 8.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಜಿಲ್ಲೆಯ 35 ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಪರೀಕ್ಷೆಯಲ್ಲಿ ಸಮಯ ಪರಿಪಾಲನೆ ಅತ್ಯವಶ್ಯಕವಾಗಿದ್ದು, ಪರೀಕ್ಷಾ ಕೊಠಡಿಗಳಲ್ಲಿ ತಪ್ಪದೇ ಗೋಡೆ ಗಡಿಯಾರ ಅಳವಡಿಸಬೇಕು. ಪರೀಕ್ಷೆಯಲ್ಲಿ ಯಾವುದೇ ಲೋಪ ದೋಷಗಳಿಗೆ ಆಸ್ಪದ ನೀಡದೇ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಲು ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಗಂಗಪ್ಪ ಕುರ್ತಕೋಟಿ, ಭೂ ದಾಖಲೆಗಳ ಇಲಾಖೆ ಉಪನಿರ್ದೇಶಕ ರುದ್ರಗೌಡ, ಅಂಗವಿಕಲ ಕಲ್ಯಾಣ ಇಲಾಖೆಯ ಅಧಿಕಾರಿ ಮಹಾಂತೇಶ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಪರೀಕ್ಷೆಗಳು ಸುಗಮವಾಗಿ ಹಾಗೂ ಶಾಂತಿಯುತವಾಗಿ ಜರುಗಲು ವೀಕ್ಷಕರು, ಜಿಲ್ಲಾ ಮಟ್ಟದ ತ್ರಿ ಸದಸ್ಯ ಸಮಿತಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದ್ದು, ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

## ಸಂಪಾದಕೀಯ

# ಪಕ್ಷಾಂತರ ರಾಜಕಾರಣಿಯ ಪ್ರಬಲ ಪೈಪೋಟಿ

ಪಕ್ಷಾಂತರ ರಾಜಕಾರಣದ ಮೂಲಕವೇ ರಾಜಕೀಯ ಅಸ್ತಿತ್ವ ಕಂಡುಕೊಂಡಿರುವ ಸಿ.ಪಿ. ಯೋಗೇಶ್ವರ್, ಈಗ ಮತ್ತೊಮ್ಮೆ ಪಕ್ಷಾಂತರ ಮಾಡಿ ಚನ್ನಪಟ್ಟಣ ಉಪಚುನಾವಣೆಯಲ್ಲಿ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ.

ಪಕ್ಷಾಂತರಕ್ಕೆ ಹೆಸರಾಗಿರುವ ಸಿ.ಪಿ. ಯೋಗೇಶ್ವರ್, ಎರಡು ಬಾರಿ ಬಿಜೆಪಿ, ಮತ್ತು ಎರಡು ಬಾರಿ ಕಾಂಗ್ರೆಸ್ ಪಾಳಯದಲ್ಲಿ ಗುರುತಿಸಿಕೊಂಡವರು. ಒಮ್ಮೆ ಸ್ವತಂತ್ರವಾಗಿ ಆಯ್ಕೆಯಾಗಿದ್ದು, ಮತ್ತೊಮ್ಮೆ ಸಮಾಜವಾದಿ ಪಕ್ಷದಿಂದಲೂ ಅದೃಷ್ಟ ಪರೀಕ್ಷೆಗೆ ಇಳಿದವರು.

ಈ ಹಿಂದಿನ ವಿಧಾನಸಭೆ ಚುನಾವಣೆಯಲ್ಲಿ ಎಚ್ ಡಿ ಕುಮಾರಸ್ವಾಮಿ ವಿರುದ್ಧ ಸೋಲು ಕಂಡರೂ, ಚನ್ನಪಟ್ಟಣ ಕ್ಷೇತ್ರದಲ್ಲಿ ಈಗಲೂ ತಮ್ಮ ವರ್ಚಸ್ಸು ಉಳಿಸಿಕೊಂಡಿದ್ದಾರೆ. ಜೆಡಿಎಸ್‌ನ ಕುಮಾರಸ್ವಾಮಿ ವಿರುದ್ಧ 15000 ಮತಗಳ ಅಂತರದಿಂದ ಸೋಲು ಕಂಡವರು. ಆದರೆ ಕಾಂಗ್ರೆಸ್ ಅಧಿಕೃತ ಅಭ್ಯರ್ಥಿಗಿಂತ 65,000ಕ್ಕೂ ಅಧಿಕ ಮತಗಳನ್ನು ಪಡೆದವರು.

ಈಗ ಅದೇ ಕ್ಷೇತ್ರದಿಂದ ಮತ್ತೊಮ್ಮೆ ಚುನಾವಣಾ ಅಖಾಡಕ್ಕೆ ಧುಮುಕಿದ್ದಾರೆ. ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಆಯ್ಕೆಯ ಮುನ್ನವೇ ಯೋಗೇಶ್ವರ ನಾಮಪತ್ರ ಸಲ್ಲಿಕೆಗೆ ಮುಂದಾಗಿದ್ದಾರೆ. ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಕೊಟ್ಟ ಬೆನ್ನಲ್ಲೇ ಕಾಂಗ್ರೆಸ್ ಸೇರಿರುವ ಯೋಗೇಶ್ವರ್, ಬಿಜೆಪಿ ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗೆ ಪ್ರಬಲ ಪ್ರತಿಸ್ಪರ್ಧೆ ಒಡ್ಡುವುದರಲ್ಲಿ ಅನುಮಾನವಿಲ್ಲ.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪಡೆದ ಮತಗಳು ಮತ್ತು ಸಿಪಿ ಯೋಗೇಶ್ವರ್ ಪಡೆದ ಮತಗಳನ್ನು ಒಟ್ಟುಗೂಡಿಸಿದರೆ, ಬಿಜೆಪಿ ಜೆಡಿಎಸ್ ಅಭ್ಯರ್ಥಿಗೆ ಸೋಲು ಎದುರಾಗೋದು ನಿಶ್ಚಿತ ಎನ್ನುವ ಲೆಕ್ಕಾಚಾರ ಶುರುವಾಗಿದೆ.

ಆದರೆ ಈ ಹಿಂದೆ ಬಿಜೆಪಿಯಿಂದ ಸ್ಪರ್ಧಿಸಿದ್ದ ಯೋಗೇಶ್ವರ್ ಅವರಿಗೆ ಈ ಬಾರಿ ಬಿಜೆಪಿ ಮತಗಳು ಬರುವುದು ಅನುಮಾನ. ಇನ್ನು ಕುಮಾರಸ್ವಾಮಿ ಅವರಿಗೆ ಬಂದಷ್ಟೆ ಮತಗಳು ಅವರ ನಂತರದ ಅಭ್ಯರ್ಥಿಗೂ ಬರುತ್ತವೆ ಎನ್ನುವುದಕ್ಕೆ ಸಾಧ್ಯವಿಲ್ಲ. ಒಟ್ಟಾರೆ ಚನ್ನಪಟ್ಟಣ ಕ್ಷೇತ್ರದಲ್ಲಿ ಕಾಂಗ್ರೆಸ್ಸಿನ ಪ್ರಬಲ ಸ್ಪರ್ಧಿಯೊಬ್ಬ ಅಖಾಡಕ್ಕೆ ಇಳಿದಿರುವುದರಿಂದ ಚನ್ನಪಟ್ಟಣ ಕ್ಷೇತ್ರ ಚರ್ಚೆಯ ಕೇಂದ್ರವಾಗಿದೆ.

## ನಮ್ಮ ಮಕ್ಕಳಿಗೆ ಮಾದರಿಯಾಗುವಂತೆ ನಾವೆಲ್ಲರೂ ನಡೆದುಕೊಳ್ಳೋಣ

# ಬರಿಗೈಲಿ ಬಂದಿಲ್ಲ ನಾವೀ ಭೂಮಿಗೆ

ಹುಟ್ಟುವಾಗ ಬೆತ್ತಲೆ, ಸತ್ತಾಗ ಬೆತ್ತಲೆ, ಮೂರು ದಿನದ ಬಾಳು, ಬರುವಾಗ ಏನನ್ನು ತಂದಿಲ್ಲ ಹೋಗುವಾಗ ಏನನ್ನು ಒಯ್ಯುವುದಿಲ್ಲ ಎಂಬ ಮಾತು ಅಲ್ಲಲ್ಲಿ ಕೇಳಿ ಬರುತ್ತವೆ. ನಾವು ಕೂಡ ಇದನ್ನು ಸಂಪೂರ್ಣ ನಿಜ ಎಂದೇ ನಂಬುತ್ತೇವೆ. ಆದರೆ ನಮಗೆ ಗೊತ್ತಿಲ್ಲ, ನಾವು ಬರುವಾಗ ನಮ್ಮ ಜೊತೆಗೆ ಈ ಐದು ವಿಷಯಗಳನ್ನು ಹೊತ್ತು ತರುತ್ತೇವೆ.

ಪಂಚೈತಾನಪೀ ಶ್ರುಜ್ಯಂತೆ
ಗರ್ಭಸ್ತೈವ ದೇಹಿನಃ
ಆಯುಕರ್ಮಾಚ ವಿತ್ತಂತೆ
ವಿದ್ಯಾ ನಿಧನ ನೇವಚ

ಎಂದು ಹೇಳಲಾಗಿದೆ. ಮನುಷ್ಯ ಭ್ರೂಣಾವಸ್ಥೆಯಲ್ಲಿರುವಾಗಲೇ ಮೇಲಿನ ಐದು ವಿಷಯಗಳನ್ನು ಹೊತ್ತು ಈ ಭೂಮಿಗೆ ಬರುತ್ತಾನೆ. ಆ ಐದು ವಿಷಯಗಳು ಆಯುಷ್ಯ, ಕರ್ಮ ಅಥವಾ ಉದ್ಯೋಗ, ವಿತ್ತ ಅಂದರೆ ಹಣ, ವಿದ್ಯೆ ಮತ್ತು ಸಾವು.

ಆಯುಷ್ಯ–ಮನುಷ್ಯ ಹುಟ್ಟುವಾಗಲೇ ಆತನ ಆಯುಷ್ಯ ನಿರ್ಧಾರವಾಗಿರುತ್ತದೆ ಎಂದು ನಮ್ಮ ಹಿರಿಯರು ಹೇಳಿದ್ದಾರೆ, ಇದು ಅಕ್ಷರಶಃ ನಿಜ. ಪ್ರತಿ ಹುಟ್ಟುಹಬ್ಬಕ್ಕೂ ನಾವು ಒಂದೊಂದು ನಿಮಿಷವೂ ಸಾವಿಗೆ ಹತ್ತಿರವಾಗುತ್ತೇವೆ ಎಂಬುದು ಸಾರ್ವಕಾಲಿಕ ಸತ್ಯ. ನಾವು ಭೂಮಿಯ ಮೇಲೆ ಬದುಕಿರುವುದು ಆ ದೈವದ ನಿಯಾಮಕದಂತೆ.

ಕರ್ಮ–ಅಂದರೆ ಕಾಯಕ, ಕೆಲಸ ಎಂದರ್ಥ. ನಾವು ಮಾಡುವ ಕೆಲಸ ಪೂರ್ವ ನಿರ್ಧರಿತವಾದದ್ದು. ಯಾವುದೇ ಕೆಲಸ ನನ್ನ ಕೈಗೆ ಹತ್ತುತ್ತಿಲ್ಲ ಎಂದು ಕೆಲವರು ಗೋಳಾಡುವುದನ್ನು ನೋಡುತ್ತೇವೆ. ಇನ್ನೂ ಕೆಲವೆಡೆ ಎಷ್ಟೇ ಕೆಲಸ ಮಾಡಿದರೂ ತೃಪ್ತಿ ನೀಡುವುದಿಲ್ಲ.

ಪೂರ್ವಜನ್ಮಂ ಕೃತಂ ಕರ್ಮ–ಅಂದರೆ ನಾವು ಮಾಡುವ ಕರ್ಮಗಳು ನಮ್ಮ ಪೂರ್ವಜನ್ಮದ ಪಾಪ–ಪುಣ್ಯಗಳ ಮೇಲೆ ಅವಲಂಬಿಸಿರುತ್ತವೆ ಎಂದು ಇಲ್ಲಿ ಹೇಳಲಾಗಿದೆ.



ವಿತ್ತ ಅಥವಾ ಹಣ– ಕೆಲವರು ಎಷ್ಟೇ ದುಡಿದರೂ ಅವರ ಬಳಿ ಹಣ ಉಳಿಯುವುದಿಲ್ಲ. ಇನ್ನು ಕೆಲವರು ಎಷ್ಟೇ ಖರ್ಚು ಮಾಡಿದರೂ ಹಣವನ್ನು ದಂಡಿಯಾಗಿ ಸಂಪಾದಿಸುತ್ತಾರೆ. ಕೆಲವರು ಶ್ರೀಮಂತರಾಗಿಯೂ, ಕೆಲವರು ಬಡವರಾಗಿ ಇನ್ನೂ ಕೆಲವರು ನಿರ್ಗತಿಕರಾಗಿಯೂ ಬದುಕುತ್ತಾರೆ. ಇದು ಕೂಡ ನಮ್ಮ ಬದುಕಿನಲ್ಲಿ ಪಡೆದುಕೊಂಡು ಬಂದ ಪೂರ್ವ ನಿರ್ಧರಿತ ಭಾಗ್ಯ. ಇದಕ್ಕೆ ವ್ಯತಿರಿಕ್ತವಾಗಿ ಕೆಲವೊಮ್ಮೆ ಅನಿರೀಕ್ಷಿತ ಸೌಭಾಗ್ಯ ದೊರೆಯುತ್ತದೆ. ಇದಕ್ಕೇನು ಹೇಳುವಿರಿ ಎಂದು ಕೇಳಬಹುದು. ಆದರೆ ಅದು ಕೂಡ ಪೂರ್ವ ನಿರ್ಧರಿತವೇ ಎಂದರೆ ನಂಬಲಿಕ್ಕಿಲ್ಲ ನೀವು. ನಮ್ಮ ಸ್ವಪ್ರಯತ್ನಕ್ಕೆ ಸಿಕ್ಕ ಪ್ರತಿಫಲ ಎಂದು ನಾವು ಅಂದುಕೊಂಡರೂ ಆ ಪ್ರಯತ್ನಕ್ಕೆ ಕೂಡ ಒತ್ತಾಸೆಯಾಗುವುದು ಪೂರ್ವ ನಿರ್ಧರಿತ ಕರ್ಮವೇ ಎಂದು ಮೇಲಿನ ಶ್ಲೋಕದಲ್ಲಿ ಹೇಳಲಾಗಿದೆ.

ವಿದ್ಯೆ–ವಿದ್ಯೆಯನ್ನು ಕೂಡ ನಾವು ನಮ್ಮ ಹುಟ್ಟಿನೊಂದಿಗೆ ಪಡೆದು ಬಂದಿರುತ್ತೇವೆ. ಅತ್ಯಂತ ವಿದ್ಯಾವಂತ ಕುಟುಂಬದಲ್ಲಿ ಬುದ್ಧಿಹೀನ ಮಗು ಮತ್ತು ವಿದ್ಯೆಯ ಗಂಧವೇ ಅರಿಯದ ಮನೆಯಲ್ಲಿ ಚಾಣಾಕ್ಷಮತಿ ಮಕ್ಕಳು ಹುಟ್ಟುವುದು ಕೂಡ ಪೂರ್ವಜನ್ಮದ ಕರ್ಮಫಲ. ಕೆಲ ಮಕ್ಕಳು ಏಕ ಪಠ್ಯ ಗ್ರಾಹಿಗಳಿದ್ದರೆ ಇನ್ನು ಕೆಲವರು ಅದೆಷ್ಟೇ ಹಗಲು–ರಾತ್ರಿ ಒಂದು ಮಾಡಿ ಓದಿದರೂ ಓದಿದ್ದು ನೆನಪಿನಲ್ಲಿ ಉಳಿಯದಂತಹವರು. ಎಲ್ಲವೂ ಅವರವರು ಪಡೆದುಕೊಂಡು ಬಂದದ್ದು.

ಸಾವು– ನಾವು ಹೇಗೆ, ಯಾವಾಗ, ಏಕೆ ಮತ್ತು ಎಲ್ಲಿ ಸಾಯುತ್ತೇವೆ ಎಂಬುದು ಇಂದಿಗೂ ಯಾರಿಗೂ ಗೊತ್ತಿಲ್ಲದ ನಿಗೂಢ ಸತ್ಯ. ಅದೆಷ್ಟೇ ಹಣವಿದ್ದರೂ, ಅದೆಷ್ಟೇ ಆರೋಗ್ಯವಾಗಿದ್ದರೂ ಅದೆಷ್ಟೇ ಅನಾರೋಗ್ಯವಿದ್ದರೂ ಕೂಡ ಕಾಲನ ಕರೆ ಬಂದಾಗ ನಾವೆಲ್ಲರೂ ಹೋಗಲೇಬೇಕು. ಭೂಮಿಯ ಋಣ ಮುಗಿದಿದ್ದರೆ ಮಾತ್ರ ನಮಗೆ ಇಹಲೋಕದಿಂದ ಬಿಡುಗಡೆ.

ಅದಕ್ಕೆ ಒಂದು ಲೋಕಾರೂಢಿಯ ಮಾತು ಪ್ರಚಲಿತದಲ್ಲಿದೆ. ಹಿಂದಿನ ಜನ್ಮದ ಪಾಪ ಮುಂದಿನ ಜನ್ಮಕ್ಕೆ ಬುತ್ತಿಯ ಗಂಟಾಗಿ ಬರುತ್ತದೆ ಎಂದು. ಇದನ್ನೇ ಗರುಡ ಪುರಾಣದಲ್ಲಿ 'ನ ಭುಕ್ತಾಮ್ ಕ್ಷೀಯತೇ ಕರ್ಮ ಕಲ್ಪಕೋಟಿ ಶತೈರಪಿ' ಎಂದು ಹೇಳಿದ್ದಾರೆ. ಸಾವಿರಾರು ಕೋಟಿ ಧನರಾಶಿ ಇದ್ದರೇನು ಕರ್ಮಫಲ ತಪ್ಪದು ಎಂಬುದು ಇದರ ಅರ್ಥ.

12ನೇ ಶತಮಾನದಲ್ಲಿ ಅಣ್ಣ ಬಸವಣ್ಣನವರು 'ಬಾರದು ಬಪ್ಪದು...ಬಪ್ಪದು ತಪ್ಪದು'

ಅಂದರೆ ಜೀವನದಲ್ಲಿ ಬರುವ ಘಳಿಗೆಗಳನ್ನು ಯಾರೂ ತಪ್ಪಿಸಲಾಗದು ಮತ್ತು ಬಾರದೇ ಇರುವುದನ್ನು ಎಂದಿಗೂ ಕರೆಯಲಾಗದು ಎಂದಿದ್ದಾರೆ. ಇದನ್ನೇ ಮುಂದುವರೆದು ಮಂಕುತಿಮ್ಮನ ಕಗ್ಗದಲ್ಲಿ ಡಿ.ವಿ. ಗುಂಡಪ್ಪನವರು 'ಬದುಕು ಜಟಕಾ ಬಂಡಿ ವಿಧಿ ಅದರ ಸಾಹೇಬ, ಅವನೇಳ್ದಂತೆ ನಾವ್ ಪಯಣಿಗರು, ಮದುವೆಗೋ ಮಸಣಕೊ, ಹೋಗೆಂದ ಕಡೆ ಹೋಗು ಪದ ಕುಸಿಯೇ ನೆಲವಿಹುದು ಮಂಕುತಿಮ್ಮ' ಎಂದಿರುವುದು.

ವಿಧಾತನ ಆಣತಿಯಂತೆ ನಮ್ಮ ಬದುಕು ನಡೆಯುತ್ತದೆ. ವಿಧಿಯು ನಡೆಸುತ್ತಿರುವ ಬದುಕೆಂಬ ಜಟಕಾ ಬಂಡಿ ಏರಿರುವ ನಾವುಗಳು ಕಷ್ಟ–ಸುಖ, ನೋವು–ನಲಿವು, ದುಃಖ–ಅವಮಾನಗಳನ್ನು ಬದುಕಿನಲ್ಲಿ ಹೇಗೆ ತೆಗೆದುಕೊಂಡು ಹೋಗಬೇಕು ಎಂಬುದನ್ನು ಮದುವೆಗೆ ಹೋಗುತ್ತೇವೆಯೋ ಮಸಣಕ್ಕೆ ಹೋಗುತ್ತೇವೆಯೋ ಎಂದು ಸೂಚ್ಯವಾಗಿ ಹೇಳಿದ್ದಾರೆ. ದೇಹದ ಮತ್ತು ಭೂಮಿಯ ಋಣ ತೀರಿದಾಗ ಹೆಜ್ಜೆಗಳು ಕುಸಿದು ದೇಹ ನೆಲವ ತಾಗಿ ಜೀವ ಹಾರಿ ಹೋಗುತ್ತದೆ.

ಆದ್ದರಿಂದ ನಮ್ಮ ಮುಂದಿನ ಜೀವನ ಚೆನ್ನಾಗಿ ಇರಬೇಕಾದರೆ ನಾವು ಸ್ವಸ್ಥ ಆರೋಗ್ಯವಂತ ಮತ್ತು ಸಾತ್ವಿಕರಾಗಿ ಬದಲಾಗಲೇಬೇಕು. ನಮ್ಮ ಮಕ್ಕಳಿಗೆ ಮಾದರಿಯಾಗಿ ನಡೆದುಕೊಳ್ಳಲೇಬೇಕು. ಆ ದಿಸೆಯಲ್ಲಿ ಜೊತೆಗೂಡಿ ಹೆಜ್ಜೆ ಹಾಕುವ ಪ್ರಯತ್ನ ಮತ್ತು ಸದಾಶಯ ಸದಾ ನಮ್ಮದಾಗಿರಲಿ.

**– ವೀಣಾ ಹೇಮಂತ್‌ಗೌಡ ಪಾಟೀಲ್.**
ಮುಂಡರಗಿ, ಗದಗ.

# ಅಡರಕಟ್ಟಿ ಸಹಕಾರ ಸಂಘ ಜಿಲ್ಲೆಗೆ ಮಾದರಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಸಹಕಾರ ಇಲಾಖೆ, ಗದಗ ಹಾಗೂ ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇವುಗಳ ಸಂಯುಕ್ತ ಆಶ್ರಯದಲ್ಲಿ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ನಿರ್ದೇಶಕರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಕಾರ್ಯಾಗಾರ ಅಡರಟ್ಟಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಭವನದಲ್ಲಿ ಜರುಗಿತು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಅಡಕರಕಟ್ಟಿ ಪ್ಯಾಕ್ಸ್ ಸಹಕಾರ ಸಂಘದಲ್ಲಿ ಬರಗಾಲದಲ್ಲಿಯೂ ಕೂಡಾ 12 ಕೋಟಿ ರೂಪಾಯಿಗಳಷ್ಟು ಡಿಪಾಜಿಟ್ ಹೊಂದಿದೆ. 25 ವರ್ಷಗಳಿಂದ ರೈತರಿಗೆ ಶೇ.8 ಡಿವಿಡೆಂಡ್ ಕೊಡುತ್ತಾ ಬಂದಿದ್ದು, ಗದಗ ಜಿಲ್ಲೆಗೆ ಮಾದರಿಯಾಗಿದೆ. ಸಂಘದಲ್ಲಿ ರೈತರಿಗೆ ಬೇಕಾಗುವ ಕೃಷಿ ಪರಿಕರ, ಗೊಬ್ಬರ, ಬೀಜಗಳನ್ನು ಸಕಾಲಕ್ಕೆ ಒದಗಿಸುತ್ತಾ ಬಂದಿದೆ. ನಮ್ಮ ದೇಶದಲ್ಲಿ ಸಹಕಾರ ಚಳವಳಿ ಗ್ರಾಮೀಣರ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ನಿರ್ವಹಿಸುತ್ತಿದೆ ಎಂದು ಹೇಳಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಚನ್ನಬಸಪ್ಪ ಹಳೇಮನಿ, ಕೆಸಿಸಿ ಬ್ಯಾಂಕ್ ನಿರ್ದೇಶಕ ಜಿ.ವ್ಹಿ. ಪಾಟೀಲ ಮಾತನಾಡಿದರು. ಅಡರಕಟ್ಟಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮಹಾಂತೇಶ ಬಿ.ಹವಳದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಬಿ.ವ್ಹಿ. ಪಾಟೀಲ, ಎಚ್.ಎ. ಬಂಡೆಣ್ಣವರ, ಬಿ.ಆರ್. ನಿಡಗುಂದಿ, ಕೆ.ಸಿ. ಕೂಸನೂರಮಠ, ವಿ.ವಿ. ಪಡಸಲಗಿ, ವಿಶ್ವನಾಥ ಎಚ್.ಲಮಾಣಿ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿಗಳಾದ ಡಾ. ವಿನಾಯಕ ಎಚ್.ನಿರಂಜನ್, ಡಾ. ಪ್ರವೀಣ ಕರಿಕಟ್ಟಿ, ವ್ಹಿ.ಜಿ. ಕುಲಕರ್ಣಿ ಉಪನ್ಯಾಸ ನೀಡಿದರು. ಚಂದ್ರಶೇಖರ ಕರಿಯಪ್ಪನವರ, ನಿಂಗನಗೌಡ ಪಾಟೀಲ ನಿರ್ವಹಿಸಿದರು.



ಅಕ್ಟೋಬರ್ 20ರಂದು ಧಾರವಾಡದ ಸಂಪಿಗೆ ನಗರ ಹತ್ತಿರ ರಸ್ತೆ ಅಪಘಾತದಲ್ಲಿ ಕೆಲಗೇರಿ ಗ್ರಾಮದ ರಮೇಶ್ ಹಂಚಿನಮನಿ, ಮರೆವ್ವ ಹಂಚಿನಮನಿ, ಪ್ರಣವ್ ಹಂಚಿನಮನಿ ಮೃತಪಟ್ಟಿದ್ದು, ಇವರ ಮನೆಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಮಂಗಳವಾರ ಭೇಟಿ ನೀಡಿ, ವಾರಸುದಾರರಿಗೆ 2 ಲಕ್ಷ ರೂಪಾಯಿ ಪರಿಹಾರ ಚೆಕ್ ವಿತರಣೆ ಮಾಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಡಿಸಿಪಿ ರವೀಶ, ಆರ್‌ಟಿಓ ಅಧಿಕಾರಿ, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಾಲೆಯ ದುರವಸ್ಥೆ ಕುರಿತು ಸರಕಾರಕ್ಕೆ ದೂರು

■ವಿಜಯಸಾಕ್ಷಿ ಸುದ್ದಿ, ಗದಗ

ಬಡ ಮಕ್ಕಳ ವಿದ್ಯಾರ್ಜನೆಗಾಗಿ ಗದಗ ಜಿಲ್ಲಾ ಕೇಂದ್ರದಲ್ಲಿರುವ ಎಸ್.ಎಮ್. ಕೃಷ್ಣ ಆಶ್ರಯ ಕಾಲೋನಿಯಲ್ಲಿ ಸರಕಾರ ನಿರ್ಮಿಸಿರುವ ಸರಕಾರಿ ಹಿರಿಯ ಗಂಡು ಮಕ್ಕಳ ಉರ್ದು ಶಾಲೆ ನಂ.5ರ ದುರಾವಸ್ಥೆಯಿಂದ ಶಾಲಾ ಮಕ್ಕಳು, ಪಾಲಕರು ಭೀತಿಗೀಡಾಗಿದ್ದಾರೆಂದು ಗದಗ ಜಿಲ್ಲಾ ಸಾರ್ವಜನಿಕರ ಕುಂದುಕೊರತೆಗಳ ನಿವಾರಣಾ ಕೇಂದ್ರದ ಅಧ್ಯಕ್ಷ ಎಮ್.ಸಲೀಮ್ ಅಹ್ಮದ್ ಮಾಳೇಕೊಪ್ಪ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಧುರೀಣರು ಸರಕಾರದ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗೆ ದೂರು ಸಲ್ಲಿಸಿದ್ದಾರೆ.



ಆಶ್ರಯ ಕಾಲೋನಿಯಲ್ಲಿ ಕಟ್ಟಿಸಿರುವ ಈ ಶಾಲಾ ಕಟ್ಟಡ ಕಳಪೆಯಾಗಿದ್ದು, ಶಾಲಾ ಕಟ್ಟಡದ ಸುತ್ತಲೂ ಮಳೆನೀರು ನುಗ್ಗಿದೆ. ಶಾಲಾ ಮಕ್ಕಳ ಹಾಗೂ ಅಮೌಲ್ಯ ದಾಖಲೆ ಪೀಠೋಪಕರಣಗಳ ರಕ್ಷಣೆಗಾಗಿ ಸರಕಾರ ಕ್ರಮ ಕೈಕೊಳ್ಳಬೇಕೆಂದು ಎಮ್. ಸಲೀಮ್ ಅಹ್ಮದ್ ಮಾಳೇಕೊಪ್ಪ, ಪ್ರೊ. ಗೋಪಾಲ್ ನವರತ್ನ, ನೇಕಾರ ಕಾರ್ಮಿಕ ಧುರೀಣ ಬಶೀರ್ ಅಹ್ಮದ್ ಮುಳಗುಂದ, ರಾಮು ಕೆಂಚಗುಂಡಿ, ಜಮಾತ್ ಧುರೀಣ ಮುಸ್ತಾಖ್ ಅಹ್ಮದ್ ಮುಲ್ಲಾ, ತೌಫೀಖ್ ಮಜ್ಜಗಿ, ಅಸ್ಲಮ್ ಖಾದನವರ, ಸಾಮಾಜಿಕ ಕಾರ್ಯಕರ್ತ ಇಸ್ಮಾಯಿಲ್ ಬೂವಾಜಿ ರಾಜ್ಯದ ಶಿಕ್ಷಣ ಇಲಾಖೆಯೊಂದಿಗೆ ಜಿಲ್ಲಾಧಿಕಾರಿಗಳು ಗದಗ ಜಿಲ್ಲಾ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಶಿಕ್ಷಣಾಧಿಕಾರಿ ಹಾಗೂ ಗದಗ–ಬೆಟಗೇರಿ ವಲಯ ಶಿಕ್ಷಣಾಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

# ಕಿತ್ತೂರು ಚೆನ್ನಮ್ಮಳ ವೇಷದಾರಿಯಾಗಿ ಅಮಿತ್ ದೊಡ್ಡಮನಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ಚಿಕ್ಕನೆರ್ತಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮೂರನೇ ತರಗತಿ ವಿದ್ಯಾರ್ಥಿ ಅಮಿತ್ ದೊಡ್ಡಮನಿ ರಾಣಿ ಚೆನ್ನಮ್ಮ ಜಯಂತ್ಯುತ್ಸವದ ಅಂಗವಾಗಿ ಸಂಗೊಳ್ಳಿ ರಾಯಣ್ಣನ ವೇಷಧರಿಸಿ ಗ್ರಾಮದ ಜನರ ಗಮನ ಸೆಳೆದನು.



# ಕಿತ್ತೂರು ಚೆನ್ನಮ್ಮಳ ವೇಷದಾರಿಯಾಗಿ ಆಲಿಯಾ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ಚಿಕ್ಕನೆರ್ತಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮೂರನೇ ತರಗತಿ ವಿದ್ಯಾರ್ಥಿನಿ ಆಲಿಯಾ ನದಾಫ್ ರಾಣಿ ಚೆನ್ನಮ್ಮ ಜಯಂತ್ಯುತ್ಸವದ ಅಂಗವಾಗಿ ಚೆನ್ನಮ್ಮನ ವೇಷಧರಿಸಿ ಗ್ರಾಮದ ಜನರ ಗಮನ ಸೆಳೆದಳು.



## 'ಪಂ. ಪುಟ್ಟರಾಜ ಸಾಹಿತ್ಯೋತ್ಸವ–2024' ಕಾರ್ಯಕ್ರಮದಲ್ಲಿ ಚನ್ನವೀರಶ್ರೀ

# ಪಂ. ಪುಟ್ಟರಾಜರ ಜನ್ಮದಿನವನ್ನು ಸರಕಾರವೇ ಆಚರಿಸಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರು ಕನ್ನಡ, ಹಿಂದಿ ಮತ್ತು ಸಂಸ್ಕೃತದಲ್ಲಿ ವಿವಿಧ ಪ್ರಕಾರದ ಸಾಹಿತ್ಯ ರಚಿಸಿದ್ದು, ಸರಕಾರವೇ ಪೂಜ್ಯರ ಸಮಗ್ರ ಸಾಹಿತ್ಯ ಸಂಪುಟ ಪ್ರಕಟಿಸಿ ಅವರ ಸಾಹಿತ್ಯ, ಜನ ಸಾಮಾನ್ಯರಿಗೆ ತಲುಪಿಸುವ ಕೆಲಸ ಮಾಡಲಿ ಎಂದು ಕಡಣಿ ಸಂಸ್ಥಾನ ಹಿರೇಮಠದ ವೇ. ಚನ್ನವೀರ ಸ್ವಾಮಿಗಳು ಸರಕಾರಕ್ಕೆ ಒತ್ತಾಯಿಸಿದರು.

ಅವರು ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಗದಗ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವುಗಳ ಸಂಯುಕ್ತ ಆಶ್ರಯದಲ್ಲಿ ಅ.20ರಂದು ಧಾರವಾಡದ ರಂಗಾಯಣದಲ್ಲಿ ಹಮ್ಮಿಕೊಂಡಿದ್ದ ಒಂದು ದಿನದ ಪಂ. ಪುಟ್ಟರಾಜ ಸಾಹಿತ್ಯೋತ್ಸವ–24 ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಪಂ. ಪುಟ್ಟರಾಜರ ಜನ್ಮದಿನವನ್ನು ಸರಕಾರದಿಂದ ಆಚರಿಸಬೇಕು ಎಂದು ಸೇವಾ ಸಮಿತಿಯಿಂದ ಸರಕಾರಕ್ಕೆ ಈಗಾಗಲೇ ಮನವಿ ಸಲ್ಲಿಸಿದ್ದು, ಸರಕಾರ ಸ್ಪಂದಿಸಿ ಪೂಜ್ಯರ ಜನ್ಮದಿನ ಆಚರಣೆಗೆ ಚಾಲನೆ ನೀಡಲಿ ಎಂದು ಹೇಳಿದರು.

ಕ.ವಿ.ವಿ.ಲಲಿತಕಲಾ ಹಾಗೂ ಸಂಗೀತ ಮಹಾವಿದ್ಯಾಲಯದ ಸಹಾಯಕ ಉಪನ್ಯಾಸಕ, ಸಾಹಿತಿ ಡಾ. ಎ.ಎಲ್. ದೇಸಾಯಿ ದಾರವಾಡ ಮಾತನಾಡಿ, ಪಂ. ಪಂಚಾಕ್ಷರಿ ಗವಾಯಿಗಳವರ ನಾಟಕ ರಂಗಾಯಣದ ಮೂಲಕ



ಪ್ರಯೋಗವಾಗಬೇಕು. ಈ ಕೆಲಸ ಧಾರವಾಡದ ರಂಗಾಯಣದ ನಿರ್ದೇಶಕರರಾದ ರಾಜು ತಾಳಿಕೋಟಿ ಪ್ರಯತ್ನ ಮಾಡಬೇಕು ಎಂದು ವಿನಂತಿಸಿಕೊಂಡರು.

ರಂಗಾಯಣದ ನಿರ್ದೇಶಕ ಡಾ. ರಾಜು ತಾಳಿಕೊಟಿ ಪೂಜ್ಯ ಗುರು ಪುಟ್ಟರಾಜ ಕವಿಗವಾಯಿಗಳವರೊಂದಿಗಿನ ಒಡನಾಟ ಮತ್ತು ಪೂಜ್ಯರ ವೃತ್ತಿರಂಗಭೂಮಿಯ ಕುರಿತಾದ ಕಾಳಜಿ ಮತ್ತು ತಮ್ಮ ವೃತ್ತಿ ಬದುಕಿನಲ್ಲಿ ಪೂಜ್ಯರ ಆರ್ಶೀವಾದ ಕುರಿತಾಗಿ ಪೂಜ್ಯರನ್ನು ಸ್ಮರಿಸಿ ಮಾತನಾಡಿದರು.

ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಮನ್ಸೂರಿನ ರೇವಣಸಿದ್ಧೇಶ್ವರ ಮಠದ ಪೂಜ್ಯಶ್ರೀ ಡಾ. ಬಸವರಾಜ ದೇವರು ಮಾತನಾಡಿ ಪೂಜ್ಯ ಗುರು ಪುಟ್ಟರಾಜರ ಒಡನಾಟದ ನೆನಪು ಹಂಚಿಕೊಂಡು, ಸೇವಾ ಸಮಿತಿಯ ಬೇಡಿಕೆಗೆ ನಾವು ಸಂಪೂರ್ಣ ಬೆಂಬಲಿಸುತ್ತೇವೆ. ಮಾತ್ರವಲ್ಲದೆ, ಗುರು ಪುಟ್ಟರಾಜರಿಗೆ ಭಾರತ ರತ್ನ ಪ್ರಶಸ್ತಿಗೆ ಕರ್ನಾಟಕ ಸರಕಾರ ಶಿಫಾರಸು ಮಾಡಬೇಕು ಎಂದು ಹೇಳಿದರು.

ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಗೌರವ ಅಧ್ಯಕ್ಷ ಕೆಂಬಾವಿ ಸಂಸ್ಥಾನ ಹಿರೇಮಠದ ಶ್ರೀ ಷ. ಬ್ರ. ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ 'ರಾಜ್ಯ ಸಂಗೀತ ವಿದ್ವಾನ' ಪಂ. ಬಸವರಾಜ ಹೆಡಿಗ್ಗೊಂಡ, ರಂಗಾಯಣದ ನೂತನ ನಿರ್ದೇಶಕರರಾದ ರಾಜು ತಾಳಿಕೋಟಿ ಇವರುಗಳಿಗೆ ಸನ್ಮಾನಿಸಲಾಯಿತು. ಪತ್ರಿಕಾ ಸಂಪಾದಕ ಎಸ್.ಎಸ್. ಪಾಟೀಲ್ ವೇದಿಕೆಯಲ್ಲಿದ್ದರು.

ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ 2024 ನೆಯ 'ವರ್ಷದ ಶ್ರೇಷ್ಠ ಕೃತಿ ರತ್ನ ಪ್ರಶಸ್ತಿ' ಗೆ ಭಾಜನ ಕೃತಿ ಕರ್ತರಾದ ಭಾತ್ರಂಬದ ಪೂಜ್ಯ ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮಿಗಳ ಬೆಳಗಾವಿಯ, ಡಾ. ಪಿ. ನಾಗರಾಜ, ಚಿಂಚನಸೂರನ ಶಿವಪುತ್ರ ಕಂಠಿ, ಕಲಬುರ್ಗಿಯ ಡಾ. ಅಂಬುಜಾ ಎನ್. ಮಳಖೇಡಕರ, ಬಾದಾಮಿ ಸುರೇಶ ಅರಳಿಮರ, ಹುಬ್ಬಳಿಯ ಪದ್ಮಜಾ ಜಯತೀರ್ಥ ಉಮರ್ಜಿ, ಧಾರವಾಡದ ಡಾ. ಈರಣ್ಣ ಇಂಜಗನೇರಿ, ಭೈರಾಪೂರದ ಯಲ್ಲಪ್ಪ ಮ. ಹರ್ನಾಳಗಿ, ಧಾರವಾಡದ ಸರಸ್ವತಿ ರಾ. ಬೋಸಲೆ, ಧಾರವಾಡದ ಡಾ. ವೀಣಾ ಸಂಕನಗೌಡರ ಇವರುಗಳಿಗೆ ಪ್ರಶಸ್ತಿ ಪ್ರದಾನಮಾಡಲಾಯಿತು. ಡಾ. ಸುರೇಶ ಕಳಸನ್ನವರ ಸ್ವಾಗತಿಸಿದರು, ಬಸವರಾಜ ಹಡಪದ ಕಾರ್ಯಕ್ರಮ ನಿರೂಪಣೆ ಮಾಡಿದರು.

ವಿದುಷಿ ರೋಹಿಣಿ ಇಮಾರತಿ ಧಾರವಾಡ, ವಿದುಷಿ ಡಾ. ಸುಮಾ ಹಡಪದ ಹಳಿಯಾಳ, ವಿದುಷಿ ವಿಜಯಲಕ್ಷ್ಮೀ ಬಸಯ್ಯ ಬನ್ನಿಗೋಳಮಠ ಇವರುಗಳಿಗೆ ಪುಟ್ಟರಾಜ ಸಂಗೀತ/ನೃತ್ಯ ಸೇವಾ ಶ್ರೀ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

### ಸಂರಕ್ಷಣೆ ಪೋರ್ಟಲ್ ಮೂಲಕ ನೋಂದಣಿಗೆ ತಾರಾಮಣಿ ಜಿ.ಎಚ್ ಸೂಚನೆ

# 2024-25ರ ಹಿಂಗಾರು ಬೆಳೆ ವಿಮೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

2024-25ರ ಹಿಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಹಿಂಗಾರು ಬೆಳೆಗಳಾದ ಜೋಳ (ಮಳೆ ಆಶ್ರಿತ & ನೀರಾವರಿ), ಹುರುಳಿ (ಮಳೆ ಆಶ್ರಿತ), ಅಗಸೆ (ಮಳೆ ಆಶ್ರಿತ), ಮೆಕ್ಕೆಜೋಳ (ಮಳೆ ಆಶ್ರಿತ), ಕುಸುಬೆ (ಮಳೆ ಆಶ್ರಿತ), ಸೂರ್ಯಕಾಂತಿ (ಮಳೆ ಆಶ್ರಿತ) ಬೆಳೆಗಳಿಗೆ ವಿಮಾ ಕಂತು ತುಂಬಲು ನವೆಂಬರ್ 15, ಕಡಲೆ (ಮಳೆ ಆಶ್ರಿತ), ಮೆಕ್ಕೆಜೋಳ (ನೀರಾವರಿ), ಸೂರ್ಯಕಾಂತಿ (ನೀರಾವರಿ), ಬೆಳೆಗಳಿಗೆ ವಿಮಾ ಕಂತು ತುಂಬಲು ನವೆಂಬರ್ 30, ಹಾಗೂ ಕಡಲೆ (ನೀರಾವರಿ), ಗೋಧಿ (ಮಳೆ ಆಶ್ರಿತ & ನೀರಾವರಿ) ಬೆಳೆಗೆ ಡಿಸೆಂಬರ್ 16 ಕೊನೆಯ ದಿನಾಂಕವಾಗಿದೆ.



ಬೆಳೆ ಸಾಲ ಪಡೆಯದ ರೈತರು ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ಖಾತೆ ಪುಸ್ತಕ / ಕಂದಾಯ ರಶೀದಿಯನ್ನು ಸಂಬಂಧಿಸಿದ ಬ್ಯಾಂಕ್ ಅಥವಾ ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ ನೀಡಿ ಸಂರಕ್ಷಣೆ ಪೋರ್ಟಲ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ. ತಮ್ಮ ತಾಲೂಕಿಗೆ ಸಂಬಂಧಿಸಿದ ಗ್ರಾಮ ಪಂಚಾಯಿತಿ ಮಟ್ಟದ ಬೆಳೆಗಳು ಹಾಗೂ ಹೋಬಳಿ ಮಟ್ಟದ ಬೆಳೆಗಳನ್ನು ಆಯ್ಕೆ ಮಾಡಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವ ರೈತರಿಗೆ ಸೂಚನೆಗಳು: ರೈತರು ತಮ್ಮ ಜಮೀನಿನಲ್ಲಿ ಬಿತ್ತಿದ ಬೆಳೆಯನ್ನು ಮಾತ್ರ ಅರ್ಜಿಯಲ್ಲಿ ನಮೂದಿಸಬೇಕು. ರೈತರು ಸ್ವತಃ ತಾವೇ ಖುದ್ದಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಒಂದು ವೇಳೆ ಭೂ ಮಾಲಿಕರ ಕುಟುಂಬದ ಇತರೆ ಸದಸ್ಯರು ಬೆಳೆ ವಿಮೆಗೆ ನೋಂದಣಿ ಮಾಡುವದಿದ್ದಲ್ಲಿ ಭೂ ಮಾಲಿಕರಿಂದ ನಿರಕ್ಷೇಪಣಾ ಪತ್ರ ಮತ್ತು ಮೂಲ ಆಧಾರ್ ಪ್ರತಿಯನ್ನು ಸಲ್ಲಿಸಬೇಕು. ಬಿತ್ತಿದ ಬೆಳೆಯು ಮಳೆ ಆಶ್ರಿತವೋ ಅಥವಾ ನೀರಾವರಿ ಬೆಳೆಯೋ ಎಂಬುದನ್ನು ಸ್ಪಷ್ಟವಾಗಿ ನಮೂದಿಸಬೇಕು. ಬಿತ್ತಿದ ಬೆಳೆಯು 30 ದಿನಗಳದ್ದಾಗಿರಬೇಕು, ಸದೃಡವಾಗಿರಬೇಕು, ಬಿತ್ತನೆ ಮಾಡಿದ ಬೆಳೆಯ ಕುರಿತು ಸ್ವಯಂ ಧೃಡೀಕರಣ ನೀಡಬೇಕು. ಬೆಳೆ ಸಮೀಕ್ಷೆ ಕಡ್ಡಾಯವಾಗಿರುವದರಿಂದ ಬಿತ್ತದೆ ಇರುವ ಬೆಳೆಯನ್ನು ವಿಮೆ ಮಾಡಿಸಿದಲ್ಲಿ ಬೆಳೆ ವಿಮೆ ಪರಿಹಾರ ಪಡೆಯಲು ಅರ್ಹವಾಗುವದಿಲ್ಲ.

ಸಾಲ ಪಡೆದ ರೈತರು ಸದರಿ ಯೋಜನೆಯಡಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ ಕೊನೆಯ ದಿನಾಂಕದಿಂದ 7 (ಏಳು) ದಿನಕ್ಕಿಂತ ಮೊದಲು ಸಂಬಂಧಿಸಿದ ಬ್ಯಾಂಕಿಗೆ ನಿಗದಿತ ನಮೂನೆಯಲ್ಲಿ, ಲಿಖಿತ ರೂಪದಲ್ಲಿ ಅರ್ಜಿ ಸಲ್ಲಿಸುವದು ಹಾಗೂ ಬೆಳೆ ಸಾಲ ಪಡೆದ ರೈತರು, ಬೆಳೆ ಸಾಲ ಪಡೆದ ಬೆಳೆಯನ್ನು ತಮ್ಮ ಜಮೀನಿನಲ್ಲಿ ಬಿತ್ತನೆ ಮಾಡಲು ತಿಳಿಸಲಾಗಿದೆ.

ಬೆಳೆವಿಮೆ ತುಂಬಲು ಕೊನೆಯ ದಿನಾಂಕಗಳಲ್ಲಿ ಜನದಟ್ಟಣೆಯಾಗುವ ಸಂಭವವಿದ್ದು, ರೈತರು ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಬೆಳೆ ವಿಮೆ ತುಂಬಲು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಓರಿಯಂಟಲ್ ಜನರಲ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್ ಈ ಹಿಂಗಾರು ಹಂಗಾಮಿನ ಬೆಳೆ ವಿಮೆಯ ವಿಮಾ ಸಂಸ್ಥೆಯಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಬ್ಯಾಂಕ್, ಸಾರ್ವಜನಿಕ ಸೇವಾ ಕೇಂದ್ರ ಅಥವಾ ಸಂಬಂಧಿಸಿದ ವಿಮಾ ಸಂಸ್ಥೆಯ ಗದಗ ಶಾಖೆಯನ್ನು ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರಾದ ತಾರಾಮಣಿ ಜಿ.ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೀಕ್ಷಕರ, ಮಾರ್ಗಾಧಿಕಾರಿಗಳ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕಂದಾಯ ಇಲಾಖೆಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 26 ಮತ್ತು 27ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ.

ಈ ಪರೀಕ್ಷೆಗಳು ಸುಗಮವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರು, ಜಿಲ್ಲಾ ಮಟ್ಟದ ತ್ರಿಸದಸ್ಯ ಸಮಿತಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಗದಗ ಜಿಲ್ಲೆಯ ಮುಂಡರಗಿ ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕಾಗಿ SHP (State Hostel Portal) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ಪ್ರವೇಶಾತಿ ಸೇವೆಯನ್ನು ವೆಬ್‌ಸೈಟ್ ವಿಳಾಸ https://shp.karnataka.gov.in/ಮೂಲಕ ನವ್ಹೆಂಬರ್ 15 ರ ಒಳಗಾಗಿ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಕ್ಕೆ ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಮುಂಡರಗಿಯ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ.

# ಚನ್ನಮ್ಮ ಈ ನಾಡಿನ ಹೆಮ್ಮೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವತಂತ್ರ ಭಾರತದ ಬೆಳ್ಳಿಚುಕ್ಕಿ ಕಿತ್ತೂರ ಚನ್ನಮ್ಮ ಕನ್ನಡ ನಾಡಿನ ಸ್ವಾತಂತ್ರ್ಯ, ಇಲ್ಲಿನ ಜನ, ಜಲ, ಮತ್ತು ಸಂಪತ್ತಿನ ಸಂರಕ್ಷಣೆ ಹಾಗೂ ಸ್ವಾಭಿಮಾನಕ್ಕಾಗಿ ಜೀವನವನ್ನೇ ಸಮರ್ಪಿಸಿಕೊಂಡ ಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿಯಾಗಿದ್ದಾಳೆ ಎಂದು ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಹೇಳಿದರು.

ಅವರು ಬುಧವಾರ ವೀರರಾಣಿ ಕಿತ್ತೂರ ಚನ್ನಮ್ಮನ ವಿಜಯೋತ್ಸವದ ಅಂಗವಾಗಿ ಪಟ್ಟಣದಲ್ಲಿನ ಕಿತ್ತೂರ ಚನ್ನಮ್ಮನ ಮೂರ್ತಿಗೆ ಪೂಜೆ ಸಲ್ಲಿಸಿ ಮಾತನಾಡಿದರು.

ಬ್ರಿಟಿಷರ ವಿರುದ್ಧ ಸ್ವಾತಂತ್ರ್ಯದ ಕ್ರಾಂತಿ ಕಹಳೆ ಮೊಳಗಿಸಿದ ವೀರರಾಣಿ ಕಿತ್ತೂರು ಚನ್ನಮ್ಮ ಕನ್ನಡ ನಾಡಿನ ಹೆಮ್ಮೆ. ಚನ್ನಮ್ಮಳ ದೇಶಪ್ರೇಮ, ಶೌರ್ಯ, ಸಾಹಸ ಇಂದಿನ ಯುವ ಪೀಳಿಗೆಗೆ ಆದರ್ಶವಾಗಬೇಕು ಎಂದರು.

ಹಿರಿಯ ಮುಖಂಡರಾದ ಡಿ.ಬಿ. ಬಳಿಗಾರ, ಚನ್ನಪ್ಪ ಜಗಲಿ ಮಾತನಾಡಿ, ಚನ್ನಮ್ಮಳನ್ನು ಕೇವಲ ಒಂದು ಜಾತಿ, ಜನಾಂಗಕ್ಕೆ ಸೀಮಿತಗೊಳಿಸದೇ ಎಲ್ಲರೂ ಗೌರವಿಸಬೇಕು. ಅ.23ರಂದು ಚನ್ನಮ್ಮನ ವಿಜಯೋತ್ಸವವನ್ನು ರಾಜ್ಯ ಸರಕಾರ ಸಾರ್ವತ್ರೀಕರಣ ಗೊಳಿಸಿರುವುದು ಸ್ವಾಗತಾರ್ಹ ವಾಗಿದ್ದು, ಆಚರಣೆ ಅರ್ಥಪೂರ್ಣವಾಗಬೇಕು. ಸ್ವಾತಂತ್ರ್ಯ ಹೋರಾಟಗಾರರ, ಮಹಾತ್ಮರ ಜಯಂತ್ಯುತ್ಸವವನ್ನು ರಜಾರಹಿತವಾಗಿ ಆಚರಣೆ ಮಾಡುವುದು ಅತ್ಯಂತ ಉಪಯುಕ್ತ ಕಾರ್ಯವಾಗಿದೆ. ಚನ್ನಮ್ಮ ಈ ನಾಡಿನ ಹೆಮ್ಮೆಯ ಮಹಿಳೆಯಾಗಿದ್ದು ಅವರನ್ನು ಸ್ಮರಿಸುವ ಕಾರ್ಯವಾಗಬೇಕು ಎಂದರು.

ಈ ವೇಳೆ ಪಂಚಮಸಾಲಿ ಸಮಾಜದ ಮುಖಂಡರಾದ ಚಂಬಣ್ಣ ಬಾಳಿಕಾಯಿ, ಪ್ರವೀಣ ಬಾಳಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಈರಣ್ಣ ಕಟಗಿ, ಚಂದ್ರು ಮಾಗಡಿ, ಅಪ್ಪಣ್ಣ ಉಮಚಗಿ, ನೀಲಪ್ಪ ಶರಸೂರಿ, ಅಭಯ ಜೈನ್, ವೀರಣ್ಣ ಅಕ್ಕೂರ, ಬಸವರಾಜ ಜಾಲಗಾರ, ಬಸವರಾಜ ಗೋಡಿ, ಗಂಗಾಧರ ಗೋಡಿ, ಶಿವನಗೌಡ್ರ ಅಡರಕಟ್ಟಿ, ಶಂಕರ ಬ್ಯಾಡಗಿ, ಶಿವಜೋಗೆಪ್ಪ ಚಂದರಗಿ, ರಾಜು ಪಾಟೀಲ, ಪವನ ಬಂಕಾಪೂರ, ಪಕ್ಕೀರೇಶ ಅಣ್ಣಿಗೇರಿ, ಶಿವಾನಂದ ಬನ್ನಿಮಟ್ಟಿ, ಮಹಾಂತೇಶ ಉಮಚಗಿ, ಮಲ್ಲಿಕಾರ್ಜುನ ನೀರಾಲೋಟಿ, ಮಂಜುನಾಥ ಮುಳಗುಂದ, ಮಲ್ಲೇಶಪ್ಪ ಒಡ್ಡರ ಹಲವರಿದ್ದರು.

### ಕಿತ್ತೂರ ರಾಣಿ ಚನ್ನಮ್ಮನವರ ವಿಜಯೋತ್ಸವ ಕಾರ್ಯಕ್ರಮದಲ್ಲಿ ಮುತ್ತಣ್ಣ ಪಲ್ಲೇದ

# ರಾಣಿ ಚನ್ನಮ್ಮನ ಆದರ್ಶಗಳು ದಾರಿದೀಪ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಡ ನಾಡು ಕಂಡ ಅಪ್ರತಿಮ ಮಹಿಳೆ ಕಿತ್ತೂರು ರಾಣಿ ಚನ್ನಮ್ಮ. ಬ್ರಿಟಿಷರ ಎದೆಯಲ್ಲಿ ಭಾರತೀಯರ ಬಗ್ಗೆ ಭಯ ಹುಟ್ಟಿಸಿದ ಮೊದಲ ಮಹಿಳೆ ಕಿತ್ತೂರು ಚನ್ನಮ್ಮ. ಅವರ ವಿಜಯೋತ್ಸವವನ್ನು ಆಚರಿಸುವದೆಂದರೆ ಭಯವನ್ನು ಓಡಿಸಿ, ಮನದಲ್ಲಿ ಧೈರ್ಯ-ಸ್ಥೈರ್ಯಗಳನ್ನು ತುಂಬುವುದು ಎಂದರ್ಥ. ನಾಡು-ನುಡಿಗಾಗಿ, ಸಮಾಜ ಸುಧಾರಣೆಗಾಗಿ ಶ್ರಮಿಸಿದ ಕಿತ್ತೂರ ರಾಣಿ ಚನ್ನಮ್ಮನ ಆದರ್ಶ ವಿಚಾರಗಳು ಇಂದಿನ ಯುವಕರಿಗೆ ದಾರಿ ದೀಪವಾಗಿವೆ ಎಂದು ನರೇಗಲ್ಲ ಪಂಚಮಸಾಲಿ ವೀರಶೈವ ಲಿಂಗಾಯತ ಸಂಘದ ಅಧ್ಯಕ್ಷ ಮುತ್ತಣ್ಣ ಪಲ್ಲೇದ ಹೇಳಿದರು.



ಪಟ್ಟಣದ ಸಂತೆ ಬಜಾರಿನ ಗಜಾನನ ದೇವಸ್ಥಾನದಲ್ಲಿ ಬುಧವಾರ ನಡೆದ ಕಿತ್ತೂರ ರಾಣಿ ಚನ್ನಮ್ಮನವರ ವಿಜಯೋತ್ಸವ ಹಾಗೂ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಕನ್ನಡ ನಾಡನ್ನಾಳಿದ, ತನ್ನ ಚಿಕ್ಕ ಸಂಸ್ಥಾನವನ್ನು ಬ್ರಿಟಿಷರಿಗೆ ಬಿಟ್ಟುಕೊಡದೆ ಸೆಣಸಿದ ಧೀರ ಮಹಿಳೆ ರಾಣಿ ಚೆನ್ನಮ್ಮ ಧೈರ್ಯ, ಸಾಹಸ, ಸ್ವಾಭಿಮಾನದ ಸಂಕೇತ, ದೇಶ ಪ್ರೇಮದ ಪ್ರತೀಕ. ಸ್ವಾಭಿಮಾನಿ ಸೈನಿಕರನ್ನು ಒಗ್ಗೂಡಿಸಿ ಸ್ವತಂತ್ರ ರಾಜ್ಯಕ್ಕಾಗಿ ಛಲಬಿಡದೆ ಹೋರಾಡಿದ ವೀರ ವನಿತೆ ಚೆನ್ನಮ್ಮ. ಚೆನ್ನಮ್ಮಳ ನೆನಪಿಗಾಗಿ ನರೇಗಲ್ಲ ಪಟ್ಟಣದಲ್ಲಿ ಬೃಹತ್ ಸಮುದಾಯ ಭವನ ನಿರ್ಮಾಣ ಮಾಡಬೇಕಾಗಿದೆ. ಮುಂದಿನ ದಿನಗಳಲ್ಲಿ ಆ ಕಾರ್ಯಕ್ಕೆ ಪಟ್ಟಣದ ಸಮಾಜ ಬಾಂಧವರು ತನು, ಮನ, ಧನದ ಸಹಾಯಕ್ಕೆ ಮುಂದಾಗಬೇಕು ಎಂದರು.

ಡಾ. ಕೆ.ಬಿ. ಧನ್ನೂರ ಮಾತನಾಡಿ, ವೀರರಾಣಿ ಕಿತ್ತೂರು ಚನ್ನಮ್ಮ ಕನ್ನಡ ನಾಡಿನ ಕ್ಷಣ್ಮಣಿಯಾಗಿ, ಭಾರತ ಮಾತೆಯ ಸ್ವಾತಂತ್ರ್ಯಕ್ಕಾಗಿ ಬ್ರಿಟಿಷ್ ಆಡಳಿತ ಖಂಡಿಸಿ ಅವರೂಂದಿಗೆ ಶೌರ್ಯದಿಂದ ಹೋರಾಡಿದ ಧೀಮಂತ ಮಹಿಳೆಯಾಗಿದ್ದಾರೆ. ಇಂದಿನ ಮಹಿಳೆಯರು ಅವರಂತೆ ಕೆಚ್ಚೆದೆಯ ಧೈರ್ಯ, ಶೌರ್ಯದ ಇತಿಹಾಸವನ್ನು ತಿಳಿದು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಮಾರಂಭದಲ್ಲಿ ಪ.ಪಂ ಸದಸ್ಯರಾದ ಶ್ರೀಶೈಲಪ್ಪ ಬಂಡಿಹಾಳ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಜ್ಯೋತಿ ಪಾಯಪ್ಪಗೌಡ್ರ, ಮಂಜುಳಾ ಹುರಳಿ, ಮುಖಂಡರಾದ ಬಿ.ಕೆ ಪೊಲೀಸ್‌ಪಾಟೀಲ, ಶಶಿಧರ ಸಂಕನಗೌಡ್ರ, ಶಾಂತಪ್ಪ ಚಿಕ್ಕೊಪ್ಪದ, ನಿಂಗಪ್ಪ ಕಣವಿ, ಕಲ್ಮೇಶ ತೊಂಡಿಹಾಳ, ಬಸವರಾಜ ಕೊಟಗಿ, ಈರಪ್ಪ ಹುಯಿಲಗೋಳ, ಶರಣಪ್ಪ ಬೆಟಗೇರಿ, ಶಿವಕುಮಾರ್ ಮಾವಿನಕಾಯಿ, ಆನಂದ ಕೊಟಗಿ, ಪ್ರಕಾಶ್ ಯಲಬುರಗಿ, ಪ್ರಕಾಶ ಪಲ್ಲೇದ, ಮಹೇಶ ಶಿವಶಿಂಪರ, ಸಿದ್ದಪ್ಪ ನರಗುಂದ, ಕಳಕಪ್ಪ ಮಾವಿನಕಾಯಿ, ಪರಪ್ಪ ಬೆಡಗಲ, ಕಳಕನಗೌಡ ಪಾಟೀಲ, ಶಿವಾನಂದ ಬಂಡಿಹಾಳ, ಎಂ.ಕೆ ಬೇವಿನಕಟ್ಟಿ, ಈರಣ್ಣ ಗುಜಮಾಗಡಿ, ಶರಣಪ್ಪ ಕಲಾಲಬಂಡಿ, ಶಿವಣ್ಣ ಎಸ್, ಬಸವರಾಜ ಮಾಳವಾಡ, ಸಂತೋಷ ಕಡೆತೋಟದ, ಸತೀಶ ಮಾಳವಾಡ, ಅರವಿಂದ ಕಡೆತೋಟದ ಸೇರಿದಂತೆ ಸಮಾಜದವರಿದ್ದರು.

## ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಒತ್ತು: ಡಾ. ಅಜಯ್ ಧರ್ಮಸಿಂಗ್

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಒತ್ತು ನೀಡುವ ಉದ್ದೇಶದಿಂದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ನಮ್ಮ ಸರಕಾರ ಪ್ರತಿವರ್ಷ 5 ಸಾವಿರ ಕೋಟಿ ರೂ. ಅನುದಾನ ನೀಡುತ್ತಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯ್ ಧರ್ಮಸಿಂಗ್ ಹೇಳಿದರು.



ನಗರದ ಜಿಲ್ಲಾಡಳಿತ ಭವನದಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ ಮಾಹಿತಿ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷನಾದ ಮೇಲೆ ಅಕ್ಷರ ಆವಿಷ್ಕಾರ. ಉದ್ಯೋಗ ಆವಿಷ್ಕಾರ. ಆರೋಗ್ಯ ಆವಿಷ್ಕಾರ ಸೇರಿದಂತೆ ಹಲವಾರು ವಿನೂತನ ಕಾರ್ಯಕ್ರಮ ಜಾರಿಗೆ ತರಲಾಗಿದೆ. ಕೆ.ಕೆ.ಆರ್.ಡಿ. ಬಿ ಅನುದಾನದಲ್ಲಿ ಶೇ. 25 ಪ್ರತಿಶತ ಹಣವನ್ನು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ ಮೀಸಲಿಡಲಾಗಿದೆ ಎಂದರು.

ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ ತಾಲ್ಲೂಕು ಹಾಗೂ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ನಮ್ಮ ಭಾಗದ 21 ತಾಲ್ಲೂಕುಗಳು ಸೇರಿವೆ. ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ 41 ತಾಲ್ಲೂಕುಗಳಿದ್ದು ಇವುಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. 45 ಕೋಟಿ ರೂ. ವೆಚ್ಚದಲ್ಲಿ 112 ಬಸ್ಸುಗಳನ್ನು ಖರೀದಿಸುತ್ತಿದ್ದೇವೆ. ನಮ್ಮ ಭಾಗದಲ್ಲಿ 2618 ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ ಎಂದರು.

ಕೊಪ್ಪಳ ಜಿಲ್ಲೆಯನ್ನು ಜೈನರ ಕಾಶಿ. ಐತಿಹಾಸಿಕ ಆನೆಗೊಂದಿ ಮತ್ತು ಪಕ್ಕದಲ್ಲಿ ಹಂಪಿಯಂತಹ ಐತಿಹಾಸಿಕ ಸ್ಥಳಗಳಿಂದ ಕೂಡಿದ ಇತಿಹಾಸ ಈ ಜಿಲ್ಲೆಗೆ ಇದೆ. ಈಗಾಗಲೇ ಅಧಿಕಾರಿಗಳನ್ನು ಕರೆದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸಭೆ ಮಾಡಲಾಗಿದ್ದು ಕೆ.ಕೆ. ಆರ್.ಡಿ.ಬಿ.ಯಿಂದ ನಡೆಯುತ್ತಿರುವ. ರಸ್ತೆ. ಶಾಲಾ ವಸತಿ ಕಟ್ಟಡಗಳು. ಅಂಗನವಾಡಿ ಕೇಂದ್ರಗಳು. ಪ್ರಾಥಮಿಕ ಆರೋಗ್ಯ ಕೇಂದ್ರ. ರಂಗಮಂದಿರ ಸೇರಿದರೆ ಇತರೆ ಮೈಕ್ರೋ ಹಾಗೂ ಮ್ಯಾಕ್ರೋ ಯೋಜನೆ ಅಡಿಯಲ್ಲಿ ನಡೆಯುತ್ತಿರುವ ಹಲವಾರು ಕೆಲಸ ಮತ್ತು ಕಾರ್ಯಗಳನ್ನು ಕಾಲಮಿತಿಯಲ್ಲಿ ಮುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ, ಕೊಪ್ಪಳ ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿ. ಪಂ.ಸಿಇಒ ರಾಹುಲ್ ರತ್ನಂ ಪಾಂಡೇಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಜನರಿಗೆ ಆರೋಗ್ಯ ಸೇವೆ ನೀಡಲು ಸರ್ಕಾರ ಬದ್ಧ

▶▶ಮೊದಲನೇ ಪುಟದಿಂದ

ಇದರ ಫಲವಾಗಿ ನಮ್ಮ ಕ್ಷೇತ್ರಕ್ಕೂ ಮೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳು ದೊರೆತಿವೆ. ಯಲಬುರ್ಗಾ ಕ್ಷೇತ್ರವು ಆರ್ಥಿಕವಾಗಿ ಹಿಂದುಳಿದ ಕ್ಷೇತ್ರವಾಗಿದ್ದು, ಈ ಭಾಗದಲ್ಲಿ ಉದ್ಯಮವಿಲ್ಲ, ಖಾಸಗಿ ಆಸ್ಪತ್ರೆಗಳಿಲ್ಲ ಹಾಗೂ ಯಾವುದೇ ರೀತಿಯ ಆದಾಯದ ಮೂಲವಿಲ್ಲ. ಜನರು ಆರ್ಥಿಕವಾಗಿ ಹಿಂದುಳಿದಿದ್ದಾರೆ. ಇಂತಹ ಸಂದರ್ಭದಲ್ಲಿ ಈ ಭಾಗದ ಜನರಿಗೆ ಆರೋಗ್ಯ ಕೇಂದ್ರಗಳಿಗೆ ತೆರಳಲು ಕಷ್ಟವಾಗುತ್ತಿತ್ತು. ಯಲಬುರ್ಗಾ ಕ್ಷೇತ್ರಕ್ಕೆ ಮಂಜೂರಾದ ಮೂರು ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತಾತ್ಕಾಲಿಕವಾಗಿ ಆರಂಭಿಸಿ, ಈ ಮೂರು ಪಿ.ಹೆಚ್.ಸಿ.ಗಳಲ್ಲಿ ವೈದ್ಯರು, ಸ್ಟಾಫ್ ನರ್ಸ್, ಇತರೆ ಸಿಬ್ಬಂದಿ, ಔಷಧಿಗಳು ಹಾಗೂ ಅಗತ್ಯ ಪರಿಕರಗಳೊಂದಿಗೆ ಸೇವೆಯನ್ನು ಆರಂಭಿಸಲಾಗಿದೆ. ಬಂಡಿ, ಚಿಕ್ಕಮ್ಯಾಗೇರಿ ಹಾಗೂ ಬಳಗೇರಿ ಗ್ರಾಮಗಳ ಮೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ ನಿರ್ಮಾಣಕ್ಕೆ 4 ಕೋಟಿ ರೂ. ಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಜಮೀನು ಖರೀದಿಗೂ ಸಹ ಹಣವನ್ನು ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುನಿರಾಬಾದ್ ಕಾಡಾ ಅಧ್ಯಕ್ಷ ಹಸನಸಾಬ ದೋಟಿಹಾಳ, ಚಿಕ್ಕಮ್ಯಾಗೇರಿ ಗ್ರಾ.ಪಂ. ಅಧ್ಯಕ್ಷ ಶರಣಪ್ಪ ಕುರಿ, ಹಲವು ಗಣ್ಯರು, ಜನಪ್ರತಿನಿಧಿಗಳು, ಗ್ರಾ.ಪಂ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಚಿಕ್ಕಮ್ಯಾಗೇರಿ ಗ್ರಾಮಸ್ಥರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯಾದ್ಯಂತ ವರ್ಷವಿಡೀ 'ಗಾಂಧಿ ಭಾರತ' ಕಾರ್ಯಕ್ರಮ

▶▶ಮೊದಲನೇ ಪುಟದಿಂದ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಹೊಸ ತಂತ್ರಜ್ಞಾನದ ಮೂಲಕ ಬೆರಳ ತುದಿಯಲ್ಲಿ ಗಾಂಧೀಜಿಯವರ ಮಹತ್ವ ಕುರಿತ ಮಾಹಿತಿಗಳನ್ನು ಯುವಜನರು ಮತ್ತು ಹೊಸ ಪೀಳಿಗೆಗೆ ಮರುಪರಿಚಯಿಸುವ ಹಾಗೂ ಜಾಗತಿಕವಾಗಿ ಸುಮಾರು 100ಕ್ಕೂ ಹೆಚ್ಚು ದೇಶಗಳಲ್ಲಿರುವ ಮಹಾತ್ಮ ಗಾಂಧೀಜಿಯವರ ಪ್ರತಿಮೆ ಮತ್ತು ಸಂಬಂಧಿತ ಸ್ಥಳಗಳ ಕುರಿತ ಮಾಹಿತಿಯನ್ನು ಯುವಜನರು ಮತ್ತು ಹೊಸಪೀಳಿಗೆಗೆ ಪರಿಚಯಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಗಳ ಮೂಲಕ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು ಎಂದರು.

ಅರಣ್ಯ, ಪರಿಸರ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಗಾಂಧಿ ಭಾರತ ಕಾರ್ಯಕ್ರಮದ ಸ್ಮರಣಾರ್ಥ ರಾಜ್ಯದ ಪ್ರಮುಖ ಸ್ಥಳಗಳಲ್ಲಿ 100 ಲಕ್ಷ ಸಸಿಗಳನ್ನು ಹೆಚ್ಚುವರಿಯಾಗಿ ನೆಡಲು ಕ್ರಮವಹಿಸಲಾಗುವುದು ಎಂದರು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಮಾತನಾಡಿ, ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಗಾಂಧಿ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಈಗಾಗಲೇ ಕೆಲವು ವಿಶ್ವವಿದ್ಯಾಲಯಗಳಲ್ಲಿರುವ ಗಾಂಧಿ ಅಧ್ಯಯನ ವಿಭಾಗಗಳ ಚಟುವಟಿಕೆಗಳನ್ನು ಪುನಶ್ಚೇತನಗೊಳಿಸಲಾಗುವುದು ಎಂದರು.

ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ, ಮುಖ್ಯಮಂತ್ರಿಯವರ ನೀತಿ ಮತ್ತು ಕಾರ್ಯಕ್ರಮದ ಸಲಹೆಗಾರ ಬಿ.ಆರ್. ಪಾಟೀಲ, ಶಾಸಕರಾದ ಜೆ.ಟಿ. ಪಾಟೀಲ, ಅಲ್ಲಮಪ್ರಭು ಪಾಟೀಲ, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ವೂಡೇ ಪಿ.ಕೃಷ್ಣ, 2024ನೇ ಸಾಲಿನ ಗಾಂಧೀ ಸೇವಾ ಪ್ರಶಸ್ತಿ ಪುರಸ್ಕೃತ ಪ್ರೊ. ಜಿ.ಬಿ. ಶಿವರಾಜು, ಮಾಜಿ ಸಚಿವ ವಿನಯ ಕುಮಾರ್ ಸೊರಕೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಕಾರ್ಯಾಧ್ಯಕ್ಷ ಎನ್. ಆರ್. ವಿಶುಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಬಿ.ಬಿ. ಕಾವೇರಿ, ಆಯುಕ್ತ ಹೇಮಂತ್ ಎಂ.ನಿಂಬಾಳ್ಕರ್, ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಸಲ್ಮಾ ಕೆ.ಫಾಹಿಮ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಅಜಯ್ ನಾಗಭೂಷಣ್, ನಿರ್ದೇಶಕಿ ಡಾ. ಧರಣಿದೇವಿ ಮಾಲಗತ್ತಿ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ಚನ್ನಮ್ಮಳ ಜೀವನ ಆದರ್ಶಪ್ರಾಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವೀರ ರಾಣಿ ಕಿತ್ತೂರ ಚನ್ನಮ್ಮ ಜೀವನ ಆದರ್ಶಪ್ರಾಯವಾದುದು ಎಂದು ಶಿಕ್ಷಕಿ ಸಂಜೋತಾ ಜಿಡ್ಡಿ ಹೇಳಿದರು. ಅವರು ಪಟ್ಟಣ ಸಮೀಪದ ಕಣವಿ ಗ್ರಾಮದ ಕರ್ನಾಟಕ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವೀರ ರಾಣಿ ಕಿತ್ತೂರ ಚನ್ನಮ್ಮನ 200ನೇ ಜಯಂತ್ಯುತ್ಸವದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಸ್ವಾತಂತ್ರ್ಯ ಹೋರಾಟ ಕಿಚ್ಚು ಹಚ್ಚಿದ ಮೊದಲ ಮಹಿಳೆಯಾಗಿ ಧೈರ್ಯ ಸಾಹಸ, ದೇಶಪ್ರೇಮದ ಸಹಕಾರ ಮೂರ್ತಿಯಾಗಿದ್ದು, ಇಂದಿನ ಮಕ್ಕಳು ತಮ್ಮಲ್ಲಿ ಧೈರ್ಯ ಹಾಗೂ ದೇಶಪ್ರೇಮ ಮೈಗೂಡಿಸಿಕೊಳ್ಳಬೇಕು ಎಂದರು.

ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಸ್ವತಂತ್ರ ಭಾರತದ ಏಳಿಗೆಗಾಗಿ ಶ್ರಮಿಸಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಛೇರಿಯಲ್ಲಿ ವೀರ ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೀಪ ಬೆಳಗಿಸುವುದರ ಮೂಲಕ ಆಚರಿಸಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪಿ.ಆರ್. ಕಿರಣಗಿ, ಚನ್ನಮ್ಮನವರು ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟರು. ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕಿಂತ ಪೂರ್ವದಲ್ಲಿಯೇ ಉತ್ತರ ಕರ್ನಾಟಕದಲ್ಲಿ ಸ್ವಾತಂತ್ರ್ಯದ ಕಿಚ್ಚನ್ನು ಹಚ್ಚಿದವರು ವೀರ ರಾಣಿ ಕಿತ್ತೂರ ಚನ್ನಮ್ಮಾಜಿ. ಒಂದು ಚಿಕ್ಕ ರಾಜ್ಯವಾಗಿದ್ದ ಕಿತ್ತೂರು ರಾಜ್ಯವು ಚನ್ನಮ್ಮನವರ ಮುಂದಾಳತ್ವದಲ್ಲಿ ಬಲಿಷ್ಠ ಬ್ರಿಟಿಷರ ವಿರುದ್ಧ ಹೋರಾಡಿ ಗೆಲುವು ಸಾಧಿಸಿದರು. ಕಿತ್ತೂರ ಚನ್ನಮ್ಮಾಜಿರವರು ಕರ್ನಾಟಕದಲ್ಲಿ ಮಾತ್ರವಲ್ಲದೇ ಇಡೀ ದೇಶದಲ್ಲಿ ಹೆಸರುವಾಸಿಯಾಗಿರುವ ವೀರ ಮಹಿಳೆಯಾಗಿದ್ದಾರೆ ಎಂದು ನುಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯ ಸಂಚಾರ ವ್ಯವಸ್ಥಾಪಕ ವಿವೇಕಾನಂದ ವಿಶ್ವಜ್ಞ, ಒಬ್ಬ ಮಹಿಳೆ ಒಂದು ರಾಜ್ಯದ ಆಡಳಿತವನ್ನು ಸಮರ್ಥವಾಗಿ ನಿಭಾಯಿಸಬಲ್ಲಳು ಎಂಬುದನ್ನು ಕಿತ್ತೂರ ಚನ್ನಮ್ಮನವರು ತೋರಿಸಿಕೊಟ್ಟಿದ್ದಾರೆ. ಸ್ವಾತಂತ್ರ್ಯ ಸೇನಾನಿಗಳು ತಮ್ಮ ತ್ಯಾಗ, ಬಲಿದಾನಗಳಿಂದ ಸ್ವಾತಂತ್ರ್ಯವನ್ನು ತಂದುಕೊಟ್ಟಿದ್ದಾರೆ. ಸ್ವತಂತ್ರ ಭಾರತದ ಏಳಿಗೆಗಾಗಿ ಶ್ರಮಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ಪಿ.ವೈ. ನಾಯಕ, ವಿಜಯಶ್ರೀ ನರಗುಂದ, ಗಣೇಶ ರಾಠೋಡ, ಪ್ರಸನ್ನಕುಮಾರ ಕೆ. ಬಾಲಾನಾಯಕ್, ಬಸವರಾಜ ಅಮ್ಮನ್ನವರ, ಬಿ.ಬೋರಯ್ಯ, ಮಾಲತಿ ಎಸ್.ಎಸ್, ಅಧಿಕಾರಿಗಳಾದ ಜಿ.ವಿಜಯಕುಮಾರ, ಶ್ರೀನಾಥ ಜಿ, ಎಂ.ಬಿ. ಕಪಲಿ, ಕೃಷ್ಣಾನಂದ ಭಟ್, ಹನುಮನಗೌಡ ಜಿ, ಎಂ.ಡಿ. ಸುಂಕದ ಮತ್ತು ಕೇಂದ್ರ ಕಛೇರಿಯ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು.

### ರೋಣ ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ 6ರಿಂದ 14ರವರೆಗೆ ಗ್ರಾಮ ಸಭೆ

# ಸರ್ಕಾರದ ಯೋಜನೆಗಳನ್ನು ಪಡೆದುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಿನ 22 ಗ್ರಾಮ ಪಂಚಾಯಿತಿಲ್ಲಿ ನವೆಂಬರ್ 6ರಿಂದ 14ರವರೆಗೆ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಸಭೆ ಆಯೋಜನೆ ಮಾಡಿದ್ದು, ಜನರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುವ ಮೂಲಕ ಸರ್ಕಾರದ ಯೋಜನೆಗಳನ್ನು ತಮ್ಮದಾಗಿಸಿಕೊಳ್ಳಿ ಎಂದು ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ ತಿಳಿಸಿದ್ದಾರೆ.

ಗ್ರಾಮೀಣ ಜನರಿಗೆ ಸರ್ಕಾರದ ಯೋಜನೆಗಳನ್ನು ಒದಗಿಸುವ ವೇದಿಕೆ ಇದಾಗಿದ್ದು, ನವೆಂಬರ್ 6ರಿಂದ 14ರವರೆಗೂ ನಡೆಯಲಿವೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ-ಉದ್ಯೋಗ ಖಾತ್ರಿ ಯೋಜನೆಯಡಿ 2025-26ನೇ ಸಾಲಿನ ಕಾರ್ಮಿಕ ಅಯ್ಯವ್ಯಯ ತಯಾರಿಸಲು ಈ ಗ್ರಾಮ ಸಭೆ ಅನುಕೂಲವಾಗಲಿದ್ದು, ರೈತರಿಗೆ ಅನುಕೂಲ ವಾಗುವ ನಿಟ್ಟಿನಲ್ಲಿ ತೆ-ೂಟಗಾರಿಕೆ, ಕೃಷಿ, ರೇಷ್ಮೆ, ಇಲಾಖೆಗಳಿಂದ ಸೌಲಭ್ಯಗಳ ಮಾಹಿತಿ ಒದಗಿಸುತ್ತದೆ. ಈ ನಿಟ್ಟಿನಲ್ಲಿ ಅವಶ್ಯ ಇರುವ ಸೌಲಭ್ಯಗಳ ಬೇಡಿಕೆಯನ್ನು ಸಹ ಸಾರ್ವಜನಿಕರು ಸಲ್ಲಿಸಬಹುದು.







> ಗ್ರಾಮೀಣ ಭಾಗದಲ್ಲಿ ಅರ್ಹ ಫಲಾನುಭವಿಗಳು ನಿಮ್ಮ ಗ್ರಾಮ ಪಂಚಾಯಿತಿಯಲ್ಲಿ ನಡೆಯುವ ಗ್ರಾಮ ಸಭೆಯಲ್ಲಿ ಭಾಗವಹಿಸಿ ಬೇಡಿಕೆ ಸಲ್ಲಿಸುವ ಮೂಲಕ ಲಾಭ ಪಡೆದುಕೊಂಡು ಆರ್ಥಿಕವಾಗಿ ಸದೃಢವಾಗಿ. ಪ್ರತಿ ತಾಲೂಕಿನಲ್ಲಿ ಸಹ ಗ್ರಾಮ ಸಭೆಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಲು ಸೂಚನೆ ನೀಡಲಾಗಿದೆ.
>
> **– ಭರತ್ ಎಸ್.**
>
> ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ.

ಆಯವ್ಯಯ ತಯಾರಿಕೆಯ ಕುರಿತಂತೆ ಎಲ್ಲಾ ಗ್ರಾ.ಪಂ ವ್ಯಾಪ್ತಿಯಲ್ಲಿ ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ ಅಭಿಯಾನವನ್ನು ಐಇಸಿ ಕಾರ್ಯಕ್ರಮದ ಮೂಲಕ ಜಾಗೃತಿ ಕೈಗೊಂಡಿದ್ದು, ಕಾಮಗಾರಿಗಳ ಬೇಡಿಕೆ ಸ್ವೀಕರಿಸಲು ಗ್ರಾಮ ಮಟ್ಟದಲ್ಲಿ ಕಾರ್ಯಕ್ರಮ ಮಾಡಲಾಗಿದೆ. ಇದಲ್ಲದೇ ಗ್ರಾ.ಪಂ ಆವರಣದಲ್ಲಿ ಬೇಡಿಕೆ ಪೆಟ್ಟಿಗೆ ಇಡಲಾಗಿದ್ದು, ಅಲ್ಲಿಯೂ ಸಹ ಗ್ರಾಮಸ್ಥರು ತಮಗೆ ಬೇಕಾದ ಕಾಮಗಾರಿ ಹೆಸರನ್ನು ಬರೆದು ಬೇಡಿಕೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಧುನಿಕತೆಗೆ ತಕ್ಕಂತೆ ಜನರು ತಂತ್ರಜ್ಞಾನಕ್ಕೆ ಹೊಂದಿಕೊಂಡಿರುವ ನಿಟ್ಟಿನಲ್ಲಿ ನರೇಗಾ ಯೋಜನೆಯಡಿ ಬೇಡಿಕೆ ಸಲ್ಲಿಸಲು ಪ್ರಸಕ್ತ ವರ್ಷದಲ್ಲಿ ಕ್ಯೂಆರ್ ಕೋಡ್ ಮಾಡಲಾಗಿದೆ. ಜನರು ಈ ಕೋಡ್‌ಗಳನ್ನು ಸ್ಕ್ಯಾನ್ ಮಾಡಿಯೂ ಸಹ ಬೇಡಿಕೆ ಸಲ್ಲಿಸಬಹುದು. ಒಂದು ಮೊಬೈಲ್ ನಂಬರ್‌ನಿಂದ ಗರಿಷ್ಠ ಮೂರು ಕಾಮಗಾರಿಗಳಿಗೆ ಅರ್ಜಿ ಸಲ್ಲಿಸಬಹುದು. ಪ್ರತಿ ಅರ್ಹ ಕುಟುಂಬಕ್ಕೆ ಜೀವಿತಾವಧಿಯಲ್ಲಿ 5 ಲಕ್ಷದ ವರೆಗೂ ವೈಯಕ್ತಿಕ ಕಾಮಗಾರಿ ನೆರವು ಪಡೆದುಕೊಳ್ಳಬಹುದು.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಬಡತನ ರೇಖೆ ಕೆಳಮಟ್ಟದಲ್ಲಿ ಇರುವ ಇತರೆ ಕುಟುಂಬಗಳು, ಸ್ತ್ರೀ ಪ್ರಧಾನ ಕುಟುಂಬಗಳು, ಭೂಸುಧಾರಣಾ ಫಲಾನುಭವಿಗಳು, ಇಂದಿರಾ ಆವಾಸ್ ಯೋಜನೆಯ ಫಲಾನುಭವಿಗಳು, ಅರಣ್ಯ ಹಕ್ಕು ಕಾಯ್ದೆಯ ಫಲಾನುಭವಿಗಳು, ವಿಕಲ ಚೇತನ ಪ್ರಧಾನ ಕುಟುಂಬಗಳು, ಪ್ರಕಟಣೆಯಿಂದ ತೆಗೆದು ಹಾಕಿದ ಬುಡಕಟ್ಟು ಜನಾಂಗದವರು, ಅಲೆಮಾರಿ ಜನಗಳು, ಸಣ್ಣ ಮತ್ತು ಅತೀಸಣ್ಣ ರೈತರು ಯೋಜನೆಗೆ ಅರ್ಹತೆ ಪಡೆಯುತ್ತಾರೆ.

> ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಹಾಗೂ ಉಪ ಕಾರ್ಯದರ್ಶಿಗಳ ಸಲಹೆ-ಸೂಚನೆ ಮೇರೆಗೆ ಪ್ರಸಕ್ತ ವರ್ಷದಲ್ಲಿ ನರೇಗಾ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸಲು ಈಗಾಗಲೇ ಐಇಸಿ ಚಟುವಟಿಕೆಗಳು, ಅಭಿಯಾನದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.
>
> **– ಚಂದ್ರಶೇಖರ ಬಿ.ಕಂದಕೂರ.**
>
> ನಿರ್ದೇಶಕರು, ತಾ.ಪಂ, ರೋಣ.

#### ನರೇಗಾ ಯೋಜನೆಯ ಪ್ರಯೋಜನಗಳು

1. ನಮೂನೆ-6ರಲ್ಲಿ ಕೆಲಸ ಕೋರಿದ 15 ದಿವಸದೊಳಗೆ ಕೆಲಸ ಖಾತರಿ
2. ಕೆಲಸ ಕೋರಿದ 15 ದಿವಸದೊಳಗೆ ಕೆಲಸ ನೀಡಲು ನಿರಾಕರಿಸಿದರೆ ನಿರುದ್ಯೋಗ ಭತ್ಯೆ ಪಡೆಯಲು ಅರ್ಹರು.
3. ಗಂಡು ಹೆಣ್ಣಿಗೆ ಸಮಾನ ಕೂಲಿ 349/- ನೀಡಲಾಗುತ್ತಿದೆ.(100 ದಿನಗಳ ಕೆಲಸಕ್ಕೆ ರೂ.38.900/- ಗಳನ್ನು ಪಡೆಯಬಹುದು.
4. ವಿಶೇಷ ಚೇತನರ/65 ವರ್ಷ ಮೇಲ್ಪಟ್ಟ ವೃದ್ಧರಿಗೆ ಕೆಲಸದಲ್ಲಿ ಶೇ.50 ವಿನಾಯಿತಿ.
5. ಅಂಗವಿಕಲರಿಗೆ ಪ್ರತ್ಯೇಕ ಉದ್ಯೋಗ ಚೀಟಿ (100 ದಿನ ಪ್ರತ್ಯೇಕ + ಕುಟುಂಬಕ್ಕೂ 100 ದಿನಗಳ ಕೆಲಸ)
6. ವೈಯಕ್ತಿಕ ಕಾಮಗಾರಿಗಳಡಿ ಒಂದು ಕುಟುಂಬಕ್ಕೆ ಜೀವಿತಾವಧಿಯಲ್ಲಿ 5 ಲಕ್ಷದ ವರೆಗೆ ನೆರವು.

### ಗದಗ ಜಿಲ್ಲಾ ಪಂಚಮಸಾಲಿ ಸಮಾಜ ಹಾಗೂ ಯುವ ಘಟಕದಿಂದ ಕಾರ್ಯಕ್ರಮ

# ಅದ್ದೂರಿಯಾಗಿ ಜರುಗಿದ ಚನ್ನಮ್ಮ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿ, ಬ್ರಿಟಿಷರ ಪಾಲಿಗೆ ಸಿಂಹ ಸ್ವಪ್ನವಾಗಿದ್ದ ವೀರರಾಣಿ ಕಿತ್ತೂರು ಚನ್ನಮ್ಮಾಜೀ ಅವರ 200ನೇ ವಿಜಯೋತ್ಸವ ಹಾಗೂ 204ನೇ ಜಯಂತ್ಯುತ್ಸವವನ್ನು ಗದಗ ಜಿಲ್ಲಾ ಪಂಚಮಸಾಲಿ ಸಮಾಜ ಹಾಗೂ ಯುವ ಘಟಕದಿಂದ ಅದ್ದೂರಿಯಾಗಿ ಆಚರಿಸಲಾಯಿತು. ನಗರದ ರಾಂಂಚೋಟೇಶ್ವರ ದೇವಸ್ಥಾನದಿಂದ ಕುಂಭಮೇಳ ಮೆರವಣಿಗೆ ಆಯೋಜಿಸಲಾಗಿತ್ತು.ಮಾಜಿ ಲೋಕೋಪಯೋಗಿ ಸಚಿವ ಹಾಗೂ ಹಾಲಿ ನರಗುಂದ ಮತಕ್ಷೇತ್ರದ ಶಾಸಕ ಸಿ.ಸಿ ಪಾಟೀಲರು ಕುಂಭಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕುಂಭಮೇಳ ಮೆರವಣಿಗೆ ಚನ್ನಮ್ಮ ಸರ್ಕಲ್‌ನಲ್ಲಿ ಸಂಪನ್ನಗೊಂಡಿತು. ಮೆರವಣಿಗೆ ಕಾರ್ಯಕ್ರಮದಲ್ಲಿ ಸುಮಾರು 200ಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು.



ವೀರರಾಣಿ ಕಿತ್ತೂರು ಚನ್ನಮ್ಮಜೀ ಅವರ ಪುತ್ಥಳಿಗೆ ಶಾಸಕ ಸಿ.ಸಿ ಪಾಟೀಲ ಸೇರಿದಂತೆ ವಿವಿಧ ಮುಖಂಡರು ಮಾಲಾರ್ಪಣೆ ಮಾಡಿದರು. ನಂತರ ಕಿತ್ತೂರು ಚನ್ನಮ್ಮಾಜೀಯ ಬಲಗೈ ಬಂಟ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಿಂದ ಅದ್ದೂರಿ ಡಿಜೆ ಕಾರ್ಯಕ್ರಮ ಹಾಗೂ ಭಾವಚಿತ್ರ ಮೆರವಣಿಗೆಯನ್ನು ಆಯೋಜಿಸಲಾಗಿತ್ತು. ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾಕೂಟ, ಬಸವೇಶ್ವರ ಸರ್ಕಲ್, ಪಂಚರೌಂಡ್, ಬನ್ನಿಕಟ್ಟಿ ಮಾರ್ಗವಾಗಿ ಕಿತ್ತೂರು ರಾಣಿ ಚನ್ನಮ್ಮಾಜಿ ಅವರ ಭಾವಚಿತ್ರದ ಮೆರವಣಿಗೆ ಚೆನ್ನಮ್ಮ ಸರ್ಕಲ್‌ನಲ್ಲಿ ಅಂತ್ಯಗೊಂಡಿತು.

ಈ ಸಂದರ್ಭದಲ್ಲಿ ಲಿಂಗಾಯತ ಪಂಚಮಸಾಲಿ ಸಮಾಜದ ಮುಖಂಡ ವಿಜಯ್ ಕುಮಾರ್ ಗಡ್ಡಿ, ಶಾಂತಣ್ಣ ಮುಳವಾಡ, ಪಂಚಮಸಾಲಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ಉಪಾಧ್ಯಕ್ಷ ಬಸವರಾಜ ಗಡ್ಡೆಪ್ಪನವರ, ಶಶಿಧರ್ ದಿಂಡೂರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ಮಹೇಶ್ ದಾಸರ, ನಗರಸಭೆ ಸದಸ್ಯರಾದ ವಿಜಯಲಕಕ್ಷ್ಮೀ ಶಶಿಧರ್ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಶರಣಪ್ಪ ಗೋಳಗೊಳಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

#### ರಕ್ತದಾನ ಶಿಬಿರ

ಲಿಂಗಾಯತ ಪಂಚಮಸಾಲಿ ಗದಗ ಜಿಲ್ಲಾ ಯುವ ಘಟಕದ ವತಿಯಿಂದ ಹಳೆ ಡಿಸಿ ಆಫೀಸ್ ಸರ್ಕಲ್ ಹತ್ತಿರ ಇರುವ ಬಸವೇಶ್ವರ ರಕ್ತ ಭಂಡಾರದಲ್ಲಿ ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿತ್ತು. ಶಾಸಕ ಸಿ.ಸಿ. ಪಾಟೀಲ ರಕ್ತದಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ಉಪಾಧ್ಯಕ್ಷ ಬಸವರಾಜ ಗಡ್ಡೆಪ್ಪನವರ್ ಸೇರಿದಂತೆ ಸುಮಾರು 50ಕ್ಕೂ ಹೆಚ್ಚು ಯುವಕರು ರಕ್ತದಾನ ಮಾಡಿದರು.

# ದೇಶಪ್ರೇಮ ಮೈಗೂಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಮೊದಲ ಪ್ರಾತ ವಹಿಸಿದ ವೀರ ಮಹಿಳೆ ಚನ್ನಮ್ಮಳ ದೇಶಪ್ರೇಮವನ್ನು ಇಂದಿನ ಮಕ್ಕಳ ಅಳವಡಿಸಿಕೊಳ್ಳಬೇಕು ಎಂದು ಪ್ರಧಾನ ಗುರು ಡಾ. ಎಸ್.ವಿ. ತಮ್ಮನಗೌಡ್ರ ಹೇಳಿದರು. ಛಿಅವರು ಪಟ್ಟಣದ ಸರಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ವೀರ ರಾಣಿ ಕಿತ್ತೂರ ಚನ್ನಮ್ಮನ 200ನೇ ಜಯಂತ್ಯುತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಇಂದು ನಾವೆಲ್ಲರೂ ಸ್ವತಂತ್ರ ಭಾರತದಲ್ಲಿ ನೆಮ್ಮದಿ ಬದುಕು ನಡೆಸಲು ವೀರ ರಾಣಿ ಕಿತ್ತೂರ ಚನ್ನಮ್ಮನ ದೇಶಪ್ರೇಮ, ಧೈರ್ಯ, ಸಾಹಸ ಕಾರಣವಾಗಿದೆ. ಇಂತಹ ಮಹನೀಯರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕಾಗಿದೆ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ, ಪ್ರಧಾನ ಗುರು ಡಾ. ಎಸ್.ವಿ. ತಮ್ಮನಗೌಡ್ರ, ಪಿ.ಎಸ್. ಮರಿದೇವರಮಠ, ಕೆ.ಎಸ್. ಗಾಣಿಗೇರ, ಆರ್.ಎಂ. ರೋಣದ, ಶೋಭಾ ಪಾಟೀಲ್, ಬಸಮ್ಮಾ ಲದ್ದಿ, ಮಾಹಾಂತೇಶ ಲಾಳಿ, ಶರಣಪ್ಪ ಕಮಾಜಿ ಇದ್ದರು.

# ರಾಷ್ಟ್ರೀಯ ಲೋಕ ಅದಾಲತ್ ಡಿ.14ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಜಿಲ್ಲೆಯಲ್ಲಿ ಡಿಸೆಂಬರ್ 14ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದ್ದು, ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ. ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್.ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದ್ದು, ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು.ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಡಿ.14ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಕಡ್ಡಾಯ ಕನ್ನಡ ಭಾಷೆ, ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆ

# ಪರೀಕ್ಷಾರ್ಥಿಗಳಿಗೆ ವಸ್ತ್ರ ಸಂಹಿತೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಕ್ಟೋಬರ್ 26ರಂದು ನಡೆಯುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ ಮತ್ತು ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಅಕ್ಟೋಬರ್ 27ರಂದು ಜರುಗುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈ ಕೆಳಗಿನಂತೆ ವಸ್ತ್ರಸಂಹಿತೆ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದ್ದಾರೆ.



ಪುರುಷ ಅಭ್ಯರ್ಥಿಗಳ ವಸ್ತ್ರ ಸಂಹಿತೆ: ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲ ವಾದ್ದರಿಂದ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್ ಧರಿಸಲು ಆದ್ಯತೆ ನೀಡುವುದು. ಪ್ಯಾಂಟ್ ಮತ್ತು ಸರಳ ಪ್ಯಾಂಟ್ (ಜೇಬುಗಳು ಇಲ್ಲದಿರುವ /ಕಮ್ಮಿ ಜೇಬುಗಳಿರುವ) ಪುರುಷ ಅಭ್ಯರ್ಥಿಗಳಿಗೆ ಆದ್ಯತೆಯ ಡ್ರೆಸ್ ಕೋಡ್ ಆಗಿದೆ. ಕುರ್ತಾ, ಪೈಜಾಮ, ಜೀನ್ಸ್ ಪ್ಯಾಂಟ್ ಅನುಮತಿಸುವುದಿಲ್ಲ. ಪುರುಷ ಅಭ್ಯರ್ಥಿಗಳು ಧರಿಸುವ ಬಟ್ಟೆಗಳು ಹಗುರವಾಗಿರಬೇಕು. ಅಂದರೆ ಜಿಪ್ ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಇರುವ ಬಟ್ಟೆಗಳು ಇರಬಾರದು.

ಪರೀಕ್ಷಾ ಹಾಲ್ ಒಳಗೆ ಶೂಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗ ಇರುವ ಚಪ್ಪಲಿಗಳನ್ನು ಧರಿಸುವುದು ಸೂಕ್ತ. ಅಭ್ಯರ್ಥಿಗಳು ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣಗಳನ್ನು ಧರಿಸುವುದು ಅಥವಾ ಕಿವಿಯೋಲೆಗಳು, ಉಂಗುರಗಳು ಮತ್ತು ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ.


ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ: ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳನ್ನು ಹೊಂದಿರುವ ಬಟ್ಟೆಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು/ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗುರವಾಗದಂತೆ ಮತ್ತು ಉಲ್ಲೇಖಿಸಿರುವ ನಿಯಮದಂತೆ ಧರಿಸುವಂತೆ ನಿರ್ದೇಶಿಸಲಾಗಿದೆ. ಎತ್ತರವಾದ ಹಿಮ್ಮಡಿಯ ಶೂಗಳನ್ನು /ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ, ಚಪ್ಪಲಿಗಳನ್ನಾಗಲಿ ಧರಿಸಬಾರದು.

ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದನ್ನು ನಿಷೇಧಿಸಿದೆ (ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ)

ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು.ಪ್ರಾಧಿಕಾರವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

> ಡ್ರೆಸ್‌ಕೋಡ್ ಅನ್ನು ಅನುಸರಿಸುವುದರ ಜೊತೆಗೆ ಪರೀಕ್ಷಾ ಕೇಂದ್ರಕ್ಕೆ ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್‌ಗಳು, ಪೆನ್‌ಡ್ರೈವ್‌ಗಳು, ಇಯರ್ ಫೋನ್‌ಗಳು, ಮೈಕ್ರೋ ಫೋನ್‌ಗಳು, ಬ್ಲೂಟೂಥ್ ಸಾಧನಗಳು ಮತ್ತು ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ. ತಿನ್ನಬಹುದಾದ ಪದಾರ್ಥಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ಹಾಗೂ ತಿನ್ನುವುದನ್ನು ನಿಷೇಧಿಸಲಾಗಿದೆ. ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು. ಪೆನ್ಸಿಲ್, ಪೇಪರ್, ಎರೇಸರ್, ಪರೀಕ್ಷಾ ಕೇಂದ್ರದೊಳಗೆ ತರುವಂತಿಲ್ಲ. ತಲೆಯ ಮೇಲೆ ಟೋಪಿ/ಹ್ಯಾಟ್ ಧರಿಸಬಾರದು. ಯಾವುದೇ ರೀತಿಯ ಮಾಸ್ಕ್‌ನ್ನು ಧರಿಸುವಂತಿಲ್ಲ.

#### ನಿಧನ ವಾರ್ತೆ



**ಲಿಂಗರಾಜ ಧರ್ಮಾಯತ(ರಾಟಿ)**

ನರೇಗಲ್ಲ, ಮೂಲತಃ ನರೇಗಲ್ಲದವರಾದ ಸದ್ಯ ಹುಬ್ಬಳ್ಳಿಯಲ್ಲಿ ನೆಲೆಸಿದ್ದ ವಾಣಿಜ್ಯ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಲಿಂಗರಾಜ ವೀರಪ್ಪ ಧರ್ಮಾಯತ (74) ಬುಧವಾರ ನಿಧನರಾದರು. ಮೃತರಿಗೆ ಪತ್ನಿ, 4 ಜನ ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಗೊಜನೂರ

**ತಾಲೂಕ: ಲಕ್ಷ್ಮೇಶ್ವರ** **ಜಿಲ್ಲಾ: ಗದಗ**

**ಸಂ.ಗ್ರಾ.ಪಂಗೊ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25** **ದಿನಾಂಕ: 22/10/2024**

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಗೊಜನೂರ ಇವರು 2024-25ನೇ ಸಾಲಿನ ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕ ವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಗೊಜನೂರ ಗ್ರಾಮದ ಸರಕಾರಿ ಪ್ರೌಢಶಾಲೆ ಕಂಪೌಂಡ ನಿರ್ಮಾಣ. | 247094 | 1000 | [illegible] |
| 2 | ಗೊಜನೂರ ಗ್ರಾಮದ ಮುರಾರ್ಜಿ ವಸತಿ ಶಾಲೆ ಕಂಪೌಂಡ ನಿರ್ಮಾಣ. | 306874 | 1000 | |
| 3 | ಗೊಜನೂರ ಗ್ರಾಮದ ಸರಕಾರಿ ಉರ್ದು ಪ್ರಾಥಮಿಕ ಶಾಲೆ ಕಂಪೌಂಡ ನಿರ್ಮಾಣ. | 247094 | 1000 | |
| 4 | ಗೊಜನೂರ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಶೌಚಾಲಯ ನಿರ್ಮಾಣ. | 137247 | 500 | |
| 5 | ಗೊಜನೂರ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆ ಕಂಪೌಂಡ ನಿರ್ಮಾಣ. | 187315 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ನೀಡುವ **ದಿನಾಂಕ; 23/10/2024 ರಿಂದ 05/11/2024 ರವರೆಗೆ,** ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ **ದಿನಾಂಕ: 16-11-2024 ಮುಂಜಾನೆ 10.00 ಗಂಟೆಯಿಂದ** ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ **ಸಮಯ: 16-11-2024 ರ ಮಧ್ಯಾಹ್ನ 3.30 ಗಂಟೆ**

**ನಿಬಂಧನೆಗಳು:** 1) ಷರತ್ತು/ನಿಬಂಧನೆಗಳಿಗೆ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತು ಪಡಿಸಿ ಗ್ರಾಮ ಪಂಚಾಯತ ಕಾರ್ಯಾಲಯದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಗೊಜನೂರ**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತಿ ಗೊಜನೂರ**

**ವಾ.ಸಾ.ಇ/ಗದಗ/324/ದೇಶಪಾಂಡೆಪಬ್ಲಿಸಿಟಿ/2024-25**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka